ಸಂಪುಟ : 10 ಸಂಚಿಕೆ: 274 ಪುಟ : 4+2 ಬೆಲೆ: 3.00 ರವಿವಾರ ಡಿಸೆಂಬರ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 274 Pages : 4+2 Price : 3.00 Sunday December 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### 10ನೇ ವರ್ಷದ ವಿಜ್ಞಾನ ವಿಸ್ತತ ಕಾರ್ಯಕ್ರಮದ ಉದ್ಘಾಟನೆ, 'ಚಂದನ ಶ್ರೀ-2025' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಸಿ.ಎಂ ಸಿದ್ದರಾಮಯ್ಯ ಕರೆ

# ಸಮ ಸಮಾಜ ನಿರ್ಮಾಣಕ್ಕಾಗಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕತೆ, ವೈಚಾರಿಕತೆ ಬೆಳೆಸಿ





**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸ್ವಾತಂತ್ರ್ಯ ಬಂದು 79 ವರ್ಷಗಳಾದರೂ, ದೇಶದಲ್ಲಿ ಶೇ. 76ರಷ್ಟು ಸಾಕ್ಷರತೆ ಸಾಧಿಸಿದ್ದರೂ ಜಾತೀಯತೆ ಇನ್ನೂ ಹೋಗಿಲ್ಲ. ಜಾತಿ ವ್ಯವಸ್ಥೆ ಮರೆಯಾಗಬೇಕೆಂದು ಬಸವಣ್ಣನವರು 800 ವರ್ಷಗಳ ಹಿಂದೆಯೇ ಪ್ರಯತ್ನಿಸಿದ್ದರೂ ಸಾಧ್ಯವಾಗಲಿಲ್ಲ. ದೇಶದಲ್ಲಿ ಜಾತಿ ಮತ್ತು ಅಸಮಾನತೆಯಂತಹ ಪಿಡುಗುಗಳನ್ನು ತೊಡೆದುಹಾಕಿ ಸಮಾನತೆಯ ಸಮಾಜ ಹಾಗೂ ಜಾತ್ಯಾತೀತ ರಾಷ್ಟ್ರವನ್ನು ಕಟ್ಟಲು ವಿದ್ಯಾರ್ಥಿಗಳು ಮತ್ತು ಶಿಕ್ಷಿತ ಸಮುದಾಯದಲ್ಲಿ ವಿಜ್ಞಾನ ಮತ್ತು ವೈಚಾರಿಕ ಮನೋಭಾವ ಬೆಳೆಸುವುದು ಅತ್ಯಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಲಕ್ಷ್ಮೇಶ್ವರದ ಸಿಬಿಎಸ್‌ಇ ಸ್ಕೂಲ್ ಚಂದನದಲ್ಲಿ ಭಾರತ ರತ್ನ ಪ್ರೊ. ಸಿ.ಎನ್.ಆರ್. ರಾವ್ ಅವರ 10ನೇ ವರ್ಷದ ವಿಜ್ಞಾನ ವಿಸ್ತತ ಕಾರ್ಯಕ್ರಮದ ಉದ್ಘಾಟನೆ ಹಾಗೂ 'ಚಂದನ ಶ್ರೀ-2025' ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಕಾರಣಕ್ಕಾಗಿಯೇ ಹಿಂದಿನ ಅವಧಿಯಲ್ಲಿ ಮೌಢ್ಯ ವಿರೋಧಿ ಕಾಯ್ದೆಯನ್ನು ಜಾರಿಗೊಳಿಸಲಾಯಿತು. ಕಲಿಕೆಯ ಹಂತದಲ್ಲಿಯೇ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕತೆ ಮತ್ತು ವೈಚಾರಿಕತೆಯನ್ನು ಬೆಳೆಸಿದರೆ ಮಾತ್ರ ಮನುಷ್ಯ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದರು.

ಸರ್ಕಾರದ ಮುಖ್ಯ ಕಾರ್ಯದರ್ಶಿಯಾಗಿ ನಿವೃತ್ತರಾದ, ರೈತ ಕುಟುಂಬದಿಂದ ಬಂದ ಬಿ.ಎಸ್. ಪಾಟೀಲರ ಸೇವೆ ಗುರುತಿಸಿ 'ಚಂದನಶ್ರೀ' ಪ್ರಶಸ್ತಿ ನೀಡಿರುವುದು ಸಂತೋಷದ ವಿಚಾರ. ಜೆ.ಎಚ್. ಪಟೇಲ್ ಅವರ ಅವಧಿಯಲ್ಲಿ ಪಾಟೀಲ್ ಅವರು ಅತಿ ಹೆಚ್ಚು ಕೆಲಸ ಮಾಡಿದರು. ಬಿಬಿಎಂಪಿ ವಿಭಜನಾ ಸಮಿತಿಯ ಸದಸ್ಯರಾಗಿ ವರದಿ ನೀಡಿದ್ದರು, ಅದರಂತೆ ನಮ್ಮ ಸರಕಾರ ಬೆಂಗಳೂರು ನಗರವನ್ನು ಐದು ವಿಭಾಗಗಳಾಗಿ ವಿಂಗಡಿಸಿ, ಗ್ರೇಟರ್ ಬೆಂಗಳೂರು ಮಾಡುವ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರೊ. ಸಿಎನ್‌ಆರ್ ರಾವ್ ಅವರು ದೇಶ ಕಂಡ ಅಪರೂಪದ ವಿಜ್ಞಾನಿ ಮತ್ತು ಸಾಧಕ. ಎಸ್ಸೆಸ್ಸೆಲ್ಸಿವರೆಗೆ ಕನ್ನಡದಲ್ಲಿಯೇ ಓದಿ, ವಿಜ್ಞಾನ ಕ್ಷೇತ್ರದಲ್ಲಿ ಮಹತ್ತರ ಸಾಧನೆ ಮಾಡಿದವರಲ್ಲಿ ಅವರೂ ಒಬ್ಬರು. ಲಕ್ಷ್ಮೇಶ್ವರದ ಚಂದನ ಶಾಲೆಯಂತಹ ಸಂಸ್ಥೆಗಳು ವಿಜ್ಞಾನ ಮತ್ತು ವೈಚಾರಿಕತೆಗೆ ಹೆಚ್ಚು ಮಹತ್ವ ನೀಡುತ್ತಿರುವುದು ಶ್ಲಾಘನೀಯ ಎಂದರು.

ಕಾನೂನು ಹಾಗೂ ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಸಿದ್ದರಾಮಯ್ಯ ರೈತರ ಸಮಸ್ಯೆಗೆ ಸ್ಪಂದಿಸಿದ್ದಾರೆ. ಉತ್ತರ ಕರ್ನಾಟಕ ಭಾಗದ ಪ್ರಮುಖ ನೀರಾವರಿ ಯುಕೆಪಿ 3ನೇ ಹಂತದ ಜಾರಿಗೆ 75 ಸಾವಿರ ಎಕರೆ ಭೂಸ್ವಾಧೀನ ಆಗಬೇಕು. ಕಾಲುವೆ ನಿರ್ಮಾಣಕ್ಕೆ 50 ಸಾವಿರ ಎಕರೆ ಭೂಸ್ವಾಧೀನ ಆಗಬೇಕು. ಪ್ರತಿ ಎಕರೆ ನೀರಾವರಿಗೆ 40 ಲಕ್ಷ ರೂ., ಖುಷ್ಕಿ ಜಮಿನಿಗೆ 30 ಲಕ್ಷ ರೂ ಪರಿಹಾರ ನೀಡುವ ಮೂಲಕ ಸಿದ್ದರಾಮಯ್ಯ ರೈತರ ಹಿತ ಕಾಯುವ ಕೆಲಸ ಮಾಡಿದ್ದಾರೆ ಎಂದರು.

ರಾಜ್ಯದಲ್ಲಿ ಇನ್ಫೋಸಿಸ್ ಸ್ಥಾಪನೆಗೆ ಮೊಟ್ಟ ಮೊದಲು ನೆರವು ನೀಡಿದವರು ▶▶3ನೇ ಪುಟಕ್ಕೆ

> ದೇವರು ಮತ್ತು ಧರ್ಮ ಎಂದಿಗೂ ಅಸಮಾನತೆಯನ್ನು ಬಯಸುವುದಿಲ್ಲ. ಯಾವ ಧರ್ಮವೂ ದ್ವೇಷ ಬಿತ್ತುವ ಕೆಲಸ ಮಾಡಲ್ಲ, ಎಲ್ಲ ಧರ್ಮಗಳು ಪ್ರೀತಿಯನ್ನೇ ಬೋಧಿಸುತ್ತವೆ. ಆದರೆ ಸಮಾಜದಲ್ಲಿ ಕೆಲವರು ಧರ್ಮವನ್ನು ತಪ್ಪಾಗಿ ವ್ಯಾಖ್ಯಾನಿಸಿ ಜನರ ದಾರಿ ತಪ್ಪಿಸುತ್ತಿದ್ದಾರೆ. ಸುಶಿಕ್ಷಿತರೂ ಸಹ ಹಿಂದಿನ ಜನ್ಮದ ಪಾಪ-ಪುಣ್ಯ ಮತ್ತು ಹಣೆಬರಹದ ಬಗ್ಗೆ ಮಾತನಾಡುತ್ತಿರುವುದು ದುರ್ದೈವದ ಸಂಗತಿ.
>
> **- ಸಿದ್ದರಾಮಯ್ಯ.**
> ಮುಖ್ಯಮಂತ್ರಿಗಳು.

ಕಾರ್ಯಕ್ರಮದಲ್ಲಿ ಗ್ರೇಟರ್ ಬೆಂಗಳೂರು ನಿರ್ಮಾಣಕ್ಕೆ ಕಾರಣರಾದ ಸರಕಾರದ ನಿವೃತ್ತ ಮುಖ್ಯ ಕಾರ್ಯದರ್ಶಿ ಬಿ.ಎಸ್. ಪಾಟೀಲರಿಗೆ ಸಿದ್ದರಾಮಯ್ಯ ಅವರು 'ಚಂದನ ಶ್ರೀ-2025' ಪ್ರಶಸ್ತಿ ಪ್ರದಾನ ಮಾಡಿದರು. ಸ್ಕೂಲ್ ಚಂದನದ ಗೌರವ ನಿರ್ದೇಶಕರಾಗಿ 22 ವರ್ಷಗಳ ಕಾಲ ಸೇವೆ ಸಲ್ಲಿಸಿದ ಎಚ್.ಸಿ. ರಟಗೇರಿ ಅವರ ಪುತ್ಥಳಿ ಅನಾವರಣಗೊಳಿಸಿದರು.

### ಅಖಿಲ ಭಾರತ ಪಂಚಾಯತ್ ಪರಿಷತ್ 18ನೇ ರಾಷ್ಟ್ರೀಯ ಸಮ್ಮೇಳನ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ವಿಕೇಂದ್ರೀಕರಣ ಸೂಚ್ಯಂಕದಲ್ಲಿ ಉನ್ನತ ಸ್ಥಾನದಲ್ಲಿರುತ್ತೇವೆ




> ನಗರದಲ್ಲಿನ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಎಂಬ ತಳಮಟ್ಟದ ಆಡಳಿತದ ಉದ್ದೇಶವನ್ನು ಸಾಂಸ್ಥಿಕಗೊಳಿಸಲು ಮತ್ತು ಮುಂದುವರೆಸಲು ಕರ್ನಾಟಕದ ಬದ್ಧತೆಗೆ ಈ ಸಂಸ್ಥೆಯು ಸಾಕ್ಷಿಯಾಗಿದೆ. ಜನಸಾಮಾನ್ಯ ಪ್ರಜಾಪ್ರಭುತ್ವದ ಪ್ರಸ್ತುತತೆ ಮತ್ತು ಗ್ರಾಮ ಸ್ವರಾಜ್ಯದ ಕನಸು, ಭಾರತವು ಅದರ ಹೃದಯಭಾಗದಲ್ಲಿ ಹಳ್ಳಿಗಳ ಸಮೂಹವಾಗಿದೆ. ಮಹಾತ್ಮ ಗಾಂಧಿಯವರ 'ಗ್ರಾಮ ಸ್ವರಾಜ್' ಎಂಬ ಪವಿತ್ರ ಕನಸಿನ ಸಾಕಾರಕ್ಕೆ ಇದು ಆರಂಭಿಕ ವೇಗವಾಗಿದೆ.
>
> **- ಎಚ್.ಕೆ. ಪಾಟೀಲ.**
> ಸಚಿವರು, ಗದಗ.

**■ವಿಜಯಸಾಕ್ಷಿ ಸುದ್ದಿ, ಗದಗ**


ಕರ್ನಾಟಕವು ಪಂಚಾಯತ್ ರಾಜ್ ಚಳವಳಿಯಲ್ಲಿ ಯಾವಾಗಲೂ ಪ್ರಮುಖ ಪಾತ್ರ ವಹಿಸಿದೆ. ಅಧಿಕಾರ ವಿಕೇಂದ್ರೀಕರಣಕ್ಕೆ ನಿಜವಾದ ಬದ್ಧತೆಯನ್ನು ಪ್ರದರ್ಶಿಸಿದ ಕೆಲವೇ ರಾಜ್ಯಗಳಲ್ಲಿ ನಾವೂ ಸೇರಿದ್ದೇವೆ. ಅಧಿಕಾರ ವಿಕೇಂದ್ರೀಕರಣ ಸೂಚ್ಯಂಕದಲ್ಲಿ ನಿರಂತರವಾಗಿ ಉನ್ನತ ಸ್ಥಾನದಲ್ಲಿರುತ್ತೇವೆ ಎಂದು ಜಿಲ್ಲಾ ಉಸ್ತುವರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಶನಿವಾರ ನಾಗಾವಿಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಬೆಂಗಳೂರಿನ ಕರ್ನಾಟಕ ಪಂಚಾಯತ್ ರಾಜ್ ಪರಿಷತ್, ಆರ್‌ಡಿಪಿಆರ್ ವಿಶ್ವವಿದ್ಯಾಲಯ ಹಾಗೂ ಗ್ರಾಮೀಣಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಹಯೋಗದಲ್ಲಿ ಜರುಗಿದ ಅಖಿಲ ಭಾರತ ಪಂಚಾಯತ್ ಪರಿಷತ್ 18ನೇ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಲಿಷ್ಠ ಸಮಾಜವಾದಿ, ಜಾತ್ಯತೀತ, ಪ್ರಜಾಪ್ರಭುತ್ವ ಮತ್ತು ಗಣರಾಜ್ಯ ಆಡಳಿತ ವ್ಯವಸ್ಥೆಯ ಅಡಿಪಾಯವು ಬಲಿಷ್ಠ, ಪ್ರಾಮಾಣಿಕ, ದಕ್ಷ ಮತ್ತು ಪಾರದರ್ಶಕ ಗ್ರಾಮ ಪಂಚಾಯತ್‌ನಲ್ಲಿದೆ. ಇದು ಆಧುನಿಕ ದಿನದ ತಳಮಟ್ಟದ ಪ್ರಜಾಪ್ರಭುತ್ವದ ಸಾರವಾಗಿದೆ. ಪಂಚಾಯತ್ ರಾಜ್‌ನ್ನು ಬಲಪಡಿಸುವಲ್ಲಿ ದಿವಂಗತ ಪ್ರಧಾನಿ ರಾಜೀವ್ ಗಾಂಧಿ ಅವರ ಪಾತ್ರ ಅಪಾರ. ಜನರು ಉತ್ತಮ ಗುಣಮಟ್ಟದ ಜೀವನಕ್ಕಾಗಿ ಜನದಟ್ಟಣೆಯ ನಗರ ಕೇಂದ್ರಗಳಿಂದ ಹಳ್ಳಿಗಳಿಗೆ ಹಿಂತಿರುಗುತ್ತಾರೆ. ನಮ್ಮ ಅಭಿವೃದ್ಧಿಯ ನಿಜವಾದ ಅಳತೆಯೆಂದರೆ ಮಾನವ ಅಭಿವೃದ್ಧಿ ಸೂಚ್ಯಂಕ ಉನ್ನತಿ ಮತ್ತು ನಮ್ಮ ಜನರ ಜೀವನದ ಗುಣಮಟ್ಟ, ಕೇವಲ 'ಕಾಂಕ್ರೀಟ್ ಪ್ರಪಂಚ'ದ ನಿರ್ಮಾಣವಲ್ಲ ಎಂದು ಹೇಳಿದರು.

ಅಖಿಲ ಭಾರತ ಪಂಚಾಯತ್ ಪರಿಷತ್ ಅಧ್ಯಕ್ಷ ▶▶3ನೇ ಪುಟಕ್ಕೆ

# ಮುಖ್ಯಮಂತ್ರಿಗಳಿಗೆ ರೈತರ ಬಗ್ಗೆ ಅಪಾರ ಕಾಳಜಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯದಲ್ಲಿ ರೈತರ ಹಿತ ಕಾಯುವಲ್ಲಿ ವಿಶೇಷವಾದ ಕಾಳಜಿ ಹೊಂದಿರುವ ಸಿ.ಎಂ ಸಿದ್ದರಾಮಯ್ಯನವರು ರೈತರಿಗಾಗಿ ಅನೇಕ ಕಾರ್ಯಕ್ರಮಗಳಿಗೆ ಸ್ಪಂದನೆ ನೀಡಿದ್ದು, ರೈತರ ಬಗ್ಗೆ ಉತ್ತಮ ಕಾಳಜಿ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರಾಗಿದ್ದಾರೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಅವರು ಪಟ್ಟಣದ ಚಂದನ ಸ್ಕೂಲ್‌ನಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಸಿಎನ್‌ಆರ್ ರಾವ್ ಅವರ ವಿಜ್ಞಾನ ವಿಸ್ತೃತ ದಶಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕೇವಲ ಬಾಯಿ ಮಾತಿನಿಂದ ಹೇಳುವ ಜಾಯಮಾನ ಸಿದ್ದರಾಮಯ್ಯನವರದ್ದಲ್ಲ. ಏಕೆಂದರೆ ಇಂದು ಅನೇಕ ಸಮಸ್ಯೆಗಳಿಗೆ ರೈತರು ಹೋರಾಟಕ್ಕಿಳಿದಾಗ ಅದರ ಸಾಧಕ-ಬಾಧಕಗಳನ್ನು ಪರಿಶೀಲಿಸಿ ಅವುಗಳಿಗೆ ಸೂಕ್ತವಾದ ಕ್ರಮಗಳನ್ನು ಕೈಗೊಳ್ಳುವ ಮೂಲಕ ರೈತರ ಪರವಾಗಿರುವ ನಿಲುವು ಪ್ರದರ್ಶಿಸಿದ್ದಾರೆ. ಕಬ್ಬು ಬೆಳೆಗಾರರ ಬೆಳೆಗೆ ಸೂಕ್ತ ಬೆಂಬಲ ಬೆಲೆ ನೀಡಿ ಟನ್‌ಗೆ ರೂ.50 ವಿಶೇಷ ಸಹಾಯಧನ ನೀಡಿರುವದು, ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ಪ್ರಾರಂಭಿಸಲು ದಿಟ್ಟ ನಿರ್ಧಾರ ತೆಗೆದುಕೊಂಡಿರುವದು ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ನೋಡಬಹುದಾಗಿದೆ.

ಲಕ್ಷ್ಮೇಶ್ವರದಲ್ಲಿ ರೈತರು ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರವನ್ನು ಪ್ರಾರಂಭಿಸುವಂತೆ ಹೋರಾಟ ಮಾಡಿದ್ದರು. ಈ ಹೋರಾಟಕ್ಕೆ ಸ್ಪಂದಿಸಿದ ಸಿ.ಎಂ ಅವರು ಬೆಂಬಲ ಬೆಲೆ ಖರೀದಿ ಕೇಂದ್ರವನ್ನು ಪ್ರಾರಂಭಿಸಿರುವದಲ್ಲದೆ ಗದಗ, ಮುಂಡರಗಿ, ಶಿರಹಟ್ಟಿ, ರೋಣ ಸೇರಿದಂತೆ ಅನೇಕ ಕಡೆಗಳಲ್ಲಿಯೂ ಸಹ ರೈತರ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸುವ ಕಾರ್ಯವನ್ನು ಮಾಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

# ಹೆಚ್.ಸಿ. ರಟಗೇರಿ ಕಂಚಿನ ಪುತ್ಥಳಿ ಲೋಕಾರ್ಪಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸ್ಕೂಲ್ ಚಂದನದ ರೂವಾರಿಯಾಗಿ ಶಾಲೆಯನ್ನು ರಾಷ್ಟ್ರಮಟ್ಟದಲ್ಲಿ ಬೆಳಗುವಂತೆ ಮಾಡಿದ ಕೀರ್ತಿ ನಿರ್ದೇಶಕ ದಿ. ಎಚ್.ಸಿ. ರಟಗೇರಿಯವರಿಗೆ ಸಲ್ಲುತ್ತದೆ. ಎಚ್.ಸಿ. ರಟಗೇರಿಯವರು 1996ರಲ್ಲಿ ನಿವೃತ್ತಿ ಹೊಂದಿದ್ದು, ಟಿ.ಈಶ್ವರ ಅವರು ಲಕ್ಷೇಶ್ವರದಲ್ಲಿ 2003ರಲ್ಲಿ ಸ್ಕೂಲ್ ಚಂದನ ಸಿಬಿಎಸ್‌ಸಿ ಶಾಲೆ ಪ್ರಾರಂಭಿಸಲು ಮುನ್ನುಡಿ ಬರೆದರು. 89ರ ಇಳಿವಯಸ್ಸಿನಲ್ಲಿಯೂ ಸೇರಿ ಒಟ್ಟು 22 ವರ್ಷಗಳ ಕಾಲ ಯಾವುದೇ ವೇತನ, ಗೌರವಧನ ಪಡೆಯದೆ ಗೌರವ ನಿರ್ದೇಶಕರ ಜೊತೆ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ




ತರಬೇತಿ ನೀಡುತ್ತಿದ್ದರು.

ರಟಗೇರಿಯವರು ಇದೇ ವರ್ಷ ಅ. 20ರಂದು ಇಹಲೋಕ ತ್ಯಜಿಸಿದ್ದಾರೆ. ಶಿಕ್ಷಣ ಕ್ಷೇತ್ರದ ಜೊತೆ ಚಂದನ ಸ್ಕೂಲ್‌ಗೆ ತುಂಬಲಾರದ ನಷ್ಟ. ಇಂತಹ ಮಹಾನ್ ವ್ಯಕ್ತಿಯಿಂದ ಬೆಳೆದು ನಿಂತ ಚಂದನ ಶಾಲೆಯ ಅಧ್ಯಕ್ಷರಾದಿಯಾಗಿ ಮಕ್ಕಳ ಮನದಲ್ಲಿ ನೆಲೆ ನಿಂತಿದ್ದು, ಅವರ ಸವಿನೆನಪಿಗಾಗಿ ಶಾಲೆಯ ಆವರಣದಲ್ಲಿ ದಿ. ಎಚ್.ಸಿ. ರಟಗೇರಿ ಅವರ ಕಂಚಿನ ಪುತ್ಥಳಿ ಸ್ಥಾಪಿಸುವ ಮೂಲಕ ಚಂದನ ಸಂಸ್ಥೆ ಗೌರವ ಸಮರ್ಪಿಸಿದೆ.

ಶನಿವಾರ ಶಾಲೆಯ ಆವರಣದಲ್ಲಿ ಸಿಎನ್‌ಆರ್ ರಾವ್ ಅವರ ವಿಜ್ಞಾನ ವಿಸ್ತೃತ ಕಾರ್ಯಕ್ರಮದ ದಶಮಾನೋತ್ಸವ ಸಮಾರಂಭಕ್ಕೆ ಆಗಮಿಸಿದ್ದ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ದಿ. ಎಚ್.ಸಿ. ರಟಗೇರಿಯವರ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಿ, ದಿವಂಗತರ ಗುಣಗಾನ ಮಾಡಿದರು.



# ಕ್ರೀಡೆಗಳು ಜೀವನದ ಶಿಸ್ತು ಕಲಿಸುತ್ತವೆ




**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಾಲವಿನಾಯಕ ವಿದ್ಯಾನಿಕೇತನ ಶಾಲೆಯ ವಾರ್ಷಿಕ ಕ್ರೀಡಾಕೂಟಕ್ಕೆ ಏರೊಬಿಕ್ಸ್ ತರಬೇತುದಾರ ವಿನೋದ ವಿ.ಅಕ್ಕಿ ಹಾಗೂ ರಾಷ್ಟ್ರೀಯ ಮಟ್ಟದ ಸೈಕ್ಲಿಂಗ್ ಪಟು ಮಧುರಾ ವಿ.ಅಕ್ಕಿ ಅವರು ಒಲಂಪಿಕ್ ಧ್ವಜಾರೋಹಣ ನೆರವೇರಿಸಿ, ಕ್ರೀಡಾ ಜ್ಯೋತಿಯನ್ನು ಬೆಳಗಿಸಿ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ವಿನೋದ ವಿ.ಅಕ್ಕಿ ಮಾತನಾಡಿ, ವಿದ್ಯಾರ್ಥಿಗಳಿಗೆ ಕ್ರೀಡೆಗಳ ಜೊತೆಗೆ ವಿದ್ಯಾಭ್ಯಾಸವೂ ಮುಖ್ಯ. ಕ್ರೀಡೆಗಳು ಬದುಕಿನಲ್ಲಿ ಶಿಸ್ತನ್ನು ಕಲಿಸುತ್ತವೆ. ಒಬ್ಬ ಉತ್ತಮ ಕ್ರೀಡಾಪಟುವಾಗಲು ಮುಂಜಾನೆ ಬೇಗ ಏಳಬೇಕು ಮತ್ತು ದಿನನಿತ್ಯ ಆಟದ ಅಭ್ಯಾಸ ಮಾಡಬೇಕೆಂದರು.

ಶಾಲಾ ಅಧ್ಯಕ್ಷರಾದ ಎಸ್. ರವಿ, ಇ.ಎಲ್.ಸಿಯ ಮುಖ್ಯಸ್ಥರಾದ ಆರ್. ಮಲ್ಲಿಕಾ, ಪ್ಲೇ ಹೋಮ್ ಮುಖ್ಯಸ್ಥರಾದ ಗಂಗಾ, ಶಾಲೆಯ ನಿರ್ದೇಶಕರಾದ ವಿನಾಯಕ ಆರ್, ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪ ಪ್ರಾಚಾರ್ಯ ಪಿ.ಜಿ. ಬ್ಯಾಳಿ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಆರು ಸದನಗಳಿಂದ ಆಕರ್ಷಕ ಪಥಸಂಚಲನ ನಡೆಸಿ, ಒಲಂಪಿಕ್ ಧ್ವಜಕ್ಕೆ ಮತ್ತು ಅತಿಥಿಗಳಿಗೆ ಸೆಲ್ಯೂಟ್ ನೀಡಿದರು. ದೈಹಿಕ ಶಿಕ್ಷಕರಾದ ಮಂಜುನಾಥ ಅಂಗಡಿ ಆಟಗಾರರಿಗೆ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು. ಪಂಡಿತ ಪುಟ್ಟರಾಜ ಮ್ಯೂಸಿಕ್ ಕ್ಲಬ್ ವತಿಯಿಂದ ಪ್ರಗತಿ ಮಾಳಶೆಟ್ಟಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಅಂಜಲಿ ಶ್ಯಾವಿ ಅತಿಥಿಗಳನ್ನು ಪರಿಚಯಿಸಿದರೆ, ಹಾಜಿರಾ ಇಟಗಿ ಸ್ವಾಗತಿಸಿದರು. ವರ್ಷಾ ತೊಪಲಕಟ್ಟಿ ವಂದಿಸಿದರು.

## ಡ್ರಗ್ ಪೆಡ್ಲರ್‌ಗಳ ಮನೆ ಒಡೆದು ಹಾಕುವ ಹೇಳಿಕೆ : ಪರಮೇಶ್ವರ್ ಮಾತಿಗೆ ಆತಂಕ ವ್ಯಕ್ತಪಡಿಸಿದ ಕಾಂಗ್ರೆಸ್ ಹಿರಿಯ ನಾಯಕ ಚಿದಂಬರಂ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

"ಡ್ರಗ್ ಪೆಡ್ಲರ್‌ಗಳ ಬಾಡಿಗೆ ಮನೆಗಳನ್ನು ಒಡೆದು ಹಾಕುವ ಹಂತಕ್ಕೆ ಹೋಗಿದ್ದೇವೆ" ಎಂಬ ಗೃಹ ಸಚಿವ ಜಿ.ಪರಮೇಶ್ವರ್ ಹೇಳಿಕೆಗೆ ಕಾಂಗ್ರೆಸ್ ಹಿರಿಯ ನಾಯಕ, ಮಾಜಿ ಕೇಂದ್ರ ಸಚಿವ ಪಿ. ಚಿದಂಬರಂ ಆತಂಕ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಶುಕ್ರವಾರ (ಡಿಸೆಂಬರ್ 12) ಈ ಕುರಿತು ಪ್ರತಿಕ್ರಿಯಿಸಿರುವ ಅವರು, "ಮಾದಕವಸ್ತು ಮಾರಾಟಗಾರರ ಮನೆಗಳನ್ನು ಕೆಡವಲು ಬುಲ್ಡೋಜರ್‌ಗಳನ್ನು ಬಳಸಬಹುದು ಎಂಬ ಕರ್ನಾಟಕದ ಗೃಹ ಸಚಿವರ ವರದಿಯ ಬಗ್ಗೆ ನನಗೆ ಆತಂಕವಾಗಿದೆ. ಈ ವರದಿ ಸುಳ್ಳಾಗಿರಲಿ ಎಂಬುದು ನನ್ನ ನಿರೀಕ್ಷೆ" ಎಂದಿದ್ದಾರೆ.

"ಕಾನೂನಿನ ಸರಿಯಾದ ಪ್ರಕ್ರಿಯೆಯಿಲ್ಲದೆ ಮನೆಗಳನ್ನು ಕೆಡವುವುದು ಕಾನೂನುಬಾಹಿರ ಮತ್ತು ಕುಟುಂಬದ ಇತರ ಸದಸ್ಯರ ಮೂಲಭೂತ ಮತ್ತು ಮಾನವ ಹಕ್ಕುಗಳನ್ನು ಉಲ್ಲಂಘಿಸುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಅಲ್ಲದೆ, ಯುಪಿಯಲ್ಲಿ ಆಚರಣೆಯಲ್ಲಿರುವ 'ಬುಲ್ಡೋಜರ್ ನ್ಯಾಯ' ತಪ್ಪು, ಕಾನೂನುಬಾಹಿರ ಮತ್ತು ಅನ್ಯಾಯ ಎಂಬುದು ಕಾಂಗ್ರೆಸ್ ಪಕ್ಷದ ದೃಷ್ಟಿಕೋನವಾಗಿದೆ.



## ಗಸ್ತು ವಾಹನ ಹಳ್ಳಕ್ಕೆ ಉರುಳಿಸಿದ ಪಾನಮತ್ತ ಪೊಲೀಸರು; ಕ್ರೇನ್ ಚಾಲಕನ ಮೇಲೆ ಹಲ್ಲೆ



■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಶುಕ್ರವಾರ (ಡಿಸೆಂಬರ್ 12) ರಾತ್ರಿ ಪೊಲೀಸರೊಬ್ಬರು ಕಾರಿನ ನಿಯಂತ್ರಣ ಕಳೆದುಕೊಂಡ ಬಳಿಕ '112' ಪೊಲೀಸ್ ಪ್ರತಿಕ್ರಿಯೆ ವಾಹನ (ಪಿಆರ್‌ವಿ) ಹಳ್ಳಕ್ಕೆ ಉರುಳಿದೆ. ವರದಿಗಳ ಪ್ರಕಾರ, ಘಟನೆಯ ಸಮಯದಲ್ಲಿ ಪೊಲೀಸರು ಪಾನಮತ್ತರಾಗಿದ್ದರು. ಕಾರ್ ಕಂದಕಕ್ಕೆ ಬಿದ್ದಾಗ ಅವರು ಗಸ್ತು ತಿರುಗುತ್ತಿದ್ದರು ಎನ್ನಲಾಗಿದೆ. ನಂತರ, ಪೊಲೀಸರು ವಾಹನವನ್ನು ಕಂದಕದಿಂದ ಹೊರತೆಗೆಯಲು ಕ್ರೇನ್ ಅನ್ನು ಕರೆಸಿದ್ದಾರೆ ಎಂದು ವರದಿಯಾಗಿದೆ.

ಸ್ಥಳೀಯ ಮಾಧ್ಯಮಗಳ ವರದಿ ಪ್ರಕಾರ, ಕಾರ್ ಮೇಲಕ್ಕೆ ಎತ್ತಿದ ಕ್ರೇನ್ ಆಪರೇಟರ್ ಹಣ ಕೇಳಿದಾಗ ಇಬ್ಬರು ಪೊಲೀಸರು ಚಾಲಕನ ಮೇಲೆ ಹಲ್ಲೆ ನಡೆಸಿದ್ದಾರೆ. ಪೊಲೀಸರು ಹಲ್ಲೆ ನಡೆಸುತ್ತಿರುವ ವೀಡಿಯೊ ಕೂಡ ಆನ್‌ಲೈನ್‌ನಲ್ಲಿ ಕಾಣಿಸಿಕೊಂಡಿದೆ. ಆರೋಪಿ ಪೊಲೀಸರನ್ನು ಮನೋಜ್ ಮತ್ತು ಕೃಷ್ಣ ಎಂದು ಗುರುತಿಸಲಾಗಿದೆ. ನಿರ್ಲಕ್ಷ್ಯಕ್ಕಾಗಿ ಇಬ್ಬರು ಇನ್ಸ್‌ಪೆಕ್ಟರ್‌ಗಳನ್ನು ಸಹ ಅಮಾನತುಗೊಳಿಸಲಾಗಿದೆ ಎಂದು ವರದಿಯಾಗಿದೆ.


ವೀಡಿಯೊದಲ್ಲಿ, ಪೊಲೀಸ್ ಸಿಬ್ಬಂದಿ ಕ್ರೇನ್ ಚಾಲಕನ ಮೇಲೆ ಹಲ್ಲೆ ನಡೆಸುತ್ತಿರುವುದನ್ನು ಕಾಣಬಹುದು. ಘಟನೆಯ ನಂತರ, ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ನೀರಜ್ ಜದೌನ್ ಪೊಲೀಸರ ವಿರುದ್ಧ ಕ್ರಮ ಕೈಗೊಂಡರು.

ವೈರಲ್ ಆದ ವಿಡಿಯೋವನ್ನು ಗಮನದಲ್ಲಿಟ್ಟುಕೊಂಡು, ಅಲಿಗಢ ಪೊಲೀಸರು ಅಪಘಾತದಲ್ಲಿ ಭಾಗಿಯಾದ 'ಕುಡಿದ' ಪೊಲೀಸರ ವಿರುದ್ಧ ಕ್ರಮ ಕೈಗೊಂಡರು. ವೀಡಿಯೊದಲ್ಲಿ ಕಂಡುಬರುವ ಪೊಲೀಸ್ ಸಿಬ್ಬಂದಿಯನ್ನು ಅಮಾನತುಗೊಳಿಸಲಾಗಿದೆ, ಅವರ ವಿರುದ್ಧ ಇಲಾಖಾ ವಿಚಾರಣೆಯನ್ನು ಪ್ರಾರಂಭಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಕಲಾ ವಿಕಾಸ ಪರಿಷತ್‌ನ ರಜತ ಮಹೋತ್ಸವ ವರ್ಷಾಚರಣೆಯ 5ನೇ ಕಾರ್ಯಕ್ರಮ

# ಸಂಗೀತ ಸಂಭ್ರಮದ ಕಲಾವಿದ ರತ್ನಗಳು





ಕೇವಲ 11 ವರ್ಷದ ಬಾಲಕನಾಗಿದ್ದಾಗ ಗುರು ಪುಟ್ಟರಾಜರ ಸಾನ್ನಿಧ್ಯ ಸೇರಿ, ಅಪ್ಪಟ ಗುರುಕುಲ ಮಾದರಿಯ ಸಂಗೀತ ಅಧ್ಯಯನ ಮಾಡಿ, ಬೆಟ್ಟವಾಗಿ ಬೆಳೆಯುತ್ತಿರುವ ಸದ್ವಿನಯ ಸಂಪನ್ನ ಗಾಯಕ ಪಂ. ವೆಂಕಟೇಶ್ ಆಲ್ಕೋಡ್ ನಮ್ಮ ನಾಡಿನ ಹೆಮ್ಮೆಯ ಗಾಯಕರು.

ಗುರು ಪುಟ್ಟರಾಜರ ನೇರ ಶಿಷ್ಯತ್ವ ವಹಿಸಿಕೊಂಡು, ಸತತ 10 ವರ್ಷಗಳ ಕಾಲ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಅಭ್ಯಾಸ ಮಾಡಿದ ವೆಂಕಟೇಶ ಆಲ್ಕೋಡ, ಅತ್ಯಂತ ಹಿಂದುಳಿದ ದೇವದುರ್ಗ ತಾಲೂಕಿನ ಪುಟ್ಟ ಹಳ್ಳಿಯ ಅಪ್ಪಟ ಗ್ರಾಮೀಣ ಪ್ರತಿಭೆ. ಆಕಾಶವಾಣಿ 'ಎ' ಶ್ರೇಣಿಯ ಕಲಾವಿದರಾಗಿ ಮಾನ್ಯತೆ ಪಡೆದುಕೊಂಡ ಈ ಯುವ ಕಲಾವಿದ ತಮ್ಮ ಪ್ರತಿಭೆಯ ಮೂಲಕವೇ ಅನೇಕ ವೇದಿಕೆಗಳನ್ನು ಸಂಪಾದಿಸಿಕೊಂಡು, ರಾಜ್ಯ, ದೇಶ-ವಿದೇಶದ ವೇದಿಕೆಗಳಲ್ಲಿ ತಮ್ಮ ಶುದ್ಧ ಶಾಸ್ತ್ರೀಯ ಸಂಗೀತ, ದಾಸವಾಣಿ, ವಚನ ಗಾಯನದ ಮೂಲಕ ಅಪಾರ ಸಂಗೀತ ಪ್ರೇಮಿಗಳನ್ನು ಸಂಪಾದಿಸಿಕೊಂಡಿದ್ದಾರೆ.

ವೆಂಕಟೇಶ ಆಲ್ಕೋಡ್‌ರ ಕಂಠಸಿರಿಯಲ್ಲಿ ದಾಸರ ಪದಗಳನ್ನು ಕೇಳುವುದೇ ಒಂದು ವಿಶಿಷ್ಟ ಅನುಭವ. ಇವರು ಗಾಯಕ ಮಾತ್ರವಾಗಿರದೇ ಒಬ್ಬ ಗುರುವಾಗಿ, ಗುರು ಕೊಟ್ಟ ವಿದ್ಯೆಯನ್ನು ಉಚಿತವಾಗಿ ಅನೇಕ ಪ್ರತಿಭೆಗಳಿಗೆ ಧಾರೆಯೆರೆಯುತ್ತಿದ್ದಾರೆ. ಹೀಗಾಗಿ ಇವರಿಗೆಯುವ ಕಲಾ ಗುರು ಪ್ರಶಸ್ತಿ ಸಂದಿರುವುದು ಅತ್ಯಂತ ಅರ್ಥಪೂರ್ಣ.

ಇವರು ಸಂಗೀತ ನಿರ್ದೇಶಕರಾಗಿ ಸುಮಾರು 30 ಧ್ವನಿ ಅಡಕಗಳಿಗೆ ಧ್ವನಿಯಾದ್ದಾರಲ್ಲದೆ, ಹತ್ತಾರು ಧ್ವನಿ ಅಡಕಗಳಿಗೆ ಸಂಗೀತ ನಿರ್ದೇಶನ ಮಾಡಿ ಸೈ ಎನಿಸಿಕೊಂಡಿದ್ದಾರೆ. ಕರ್ನಾಟಕ ಸರ್ಕಾರದ ಡಾ. ಪಂ. ಮಲ್ಲಿಕಾರ್ಜುನ್ ಮನ್ಸೂರ್ ಯುವ ಪ್ರಶಸ್ತಿ ಪ್ರತಿಭಾ ಕಿರೀಟಕ್ಕೆ ಸೇರಿದ ಪ್ರತಿಷ್ಠಿತ ಗರಿಯಾಗಿದೆ. 'ಭಾರತರತ್ನ' ಪಂ. ಭೀಮಸೇನ್ ಜೋಶಿ ಪ್ರಶಸ್ತಿ ಇವರ ಶುದ್ಧ ಶಾಸ್ತ್ರೀಯ ಸಂಗೀತಕ್ಕೆ ಸಂದ ಗೌರವವಾಗಿದೆ. ಬೆಂಗಳೂರಿನಲ್ಲಿ ಸ್ವರ ಸಂಸ್ಕಾರ ಸಂಸ್ಥೆ ಸ್ಥಾಪಿಸಿ ಅನೇಕ ಪ್ರತಿಭೆಗಳಿಗೆ ವೇದಿಕೆ ನೀಡಿ ಪ್ರೋತ್ಸಾಹಿಸುತ್ತಿರುವ ವಿಶಿಷ್ಟ ಗುಣದ ಸಂಘಟನಾ ಚತುರರೂ ಹೌದು.

ಹಂಪಿ ಉತ್ಸವ, ಲಕ್ಕುಂಡಿ ಉತ್ಸವ, ಮೈಸೂರು ದಸರಾ ಉತ್ಸವ, ನಾಗಪುರ ಉತ್ಸವ, ಬೆಂಗಳೂರಿನ ಹರಿದಾಸರ ಹಬ್ಬ, ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡ ಸಾಹಿತ್ಯ ಸಮ್ಮೇಳನಗಳಲ್ಲಿ ಮತ್ತು ದೇಶ-ವಿದೇಶದ ಪ್ರತಿಷ್ಠಿತ ವೇದಿಕೆಗಳಲ್ಲಿ ವಚನ ಸಂಗೀತ, ಕನ್ನಡದ ಭಾವಗೀತೆ ಹಾಡಿ ಹೌದೆನಿಸಿಕೊಂಡಿದ್ದಾರೆ.

ಇಂದು ಕಲಾವಿಕಾಸ ಪರಿಷತ್ತಿನ ರಜತ ಮಹೋತ್ಸವ ಸಂಭ್ರಮದ ಐದನೇ ಕಾರ್ಯಕ್ರಮವಾಗಿ ಆಯೋಜಿಸಲಾಗಿರುವ 'ನಾಡದೇವಿಗೆ ನಮನ' ಸಂಗೀತ ಮತ್ತು ಸಾಹಿತ್ಯ ಸಂಭ್ರಮದ ಸಮಾರಂಭದಲ್ಲಿ ಅವಳಿ ನಗರದ ಸಂಗೀತ ಆಸಕ್ತರಿಗೆ ಇವರು ಸಂಗೀತದ ರಸದೌತಣ ಉಣಬಡಿಸಲಿದ್ದಾರೆ.

ರಾಘವೇಂದ್ರ ಕ್ಷತ್ರಿಯ, ತನ್ನ ಐದನೇ ವಯಸ್ಸಿನಲ್ಲಿಯೇ ಕೊಳಲು ಹಿಡಿದ ಬಾಲಕೃಷ್ಣ. ಖ್ಯಾತ ಕಲಾವಿದ, ತಂದೆ ಕೃಷ್ಣಾಜಿ ಇವರ ಮಂಗಳವಾದ್ಯ (ಶಹನಾಯಿ) ಸಂಗೀತ ಕೇಳುತ್ತಾ ಬೆಳೆದ ಕಿನ್ನರ. ಮಗನ ಸಂಗೀತ ಆಸಕ್ತಿ ಗುರುತಿಸಿದ ತಂದೆ ಕೃಷ್ಣಾಜಿ ಲಕ್ಷ್ಮೇಶ್ವರದ ಖ್ಯಾತ ಗಾಯಕ ಎಂ. ಸಂತೂಬಾಳು ಇವರಲ್ಲಿ 7 ವರ್ಷ ಪ್ರಾಥಮಿಕ ಅಧ್ಯಯನಕ್ಕೆ ಅವಕಾಶ ಮಾಡಿಕೊಟ್ಟರು. ಮುಂದೆ ವಿದುಷಿ ಮುಕ್ತಾ ಕುಲಕರ್ಣಿ ಇವರಲ್ಲಿ 5 ವರ್ಷ ಶಣ್ಮೈಘರಾಣೆಯಲ್ಲಿ ಅಧ್ಯಯನ ಮಾಡಿ ವಿದ್ವತ್ತು ಮತ್ತು ಭೂಷಣ ಪರೀಕ್ಷೆಯಲ್ಲಿ ಉತ್ತೀರ್ಣರಾದರು.

ಈಗ ಹೆಚ್ಚಿನ ವಿದ್ಯಾಭ್ಯಾಸವನ್ನು ಕಿರಣ ಧಾರಣೆಯ ಖ್ಯಾತ ಭಾನ್ಸುರಿ ವಾದಕ, ಕಲಬುರಗಿ ಆಕಾಶವಾಣಿ ನಿಲಯದ ಕಲಾವಿದರಾದ ಶೇಕ್ ಅಬ್ದುಲ್ ಖಾಜಿ ಇವರಲ್ಲಿ ಕಿರಾಣಾ ಘರಾಣದಲ್ಲಿ ತಮ್ಮ ಕಲಿಕೆಯನ್ನು ಮುಂದುವರಿಸಿರುವ ಉದಯೋನ್ಮುಖ ಕಲಾವಿದ ರಾಘವೇಂದ್ರ ನಮ್ಮ ಗದಗ ಜಿಲ್ಲೆಯ ಹೆಮ್ಮೆಯ ಪ್ರತಿಭೆ. ಹಂಪಿ ಉತ್ಸವ, ಲಕ್ಕುಂಡಿ ಉತ್ಸವ, ಆನೆಗುಂದಿ ಉತ್ಸವ, ಪಾಂಡುರಂಗ ದಿಂಡಿ ಉತ್ಸವ ಹೀಗೆ ಅನೇಕ ಪ್ರತಿಷ್ಠಿತ ಉತ್ಸವಗಳಲ್ಲಿ ತಮ್ಮ ಸುರೇಲಿ ವಾದನದ ಮೂಲಕ ಜನಮನ ಗೆಲ್ಲುತ್ತಿದ್ದಾರೆ. ಈಗ ಬೆಂಗಳೂರು ನಿವಾಸಿಯಾದ ನಮ್ಮ ಹೆಮ್ಮೆಯ ಪುಲಿಗೆರೆಯ (ಲಕ್ಷ್ಮೇಶ್ವರ) ಪ್ರತಿಭೆ. ಡಿ. 14ರಂದು ಸಂಜೆ 6 ಗಂಟೆಗೆ ವಿವೇಕಾನಂದ ನಗರದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಹಮ್ಮಿಕೊಂಡಿರುವ ಕಲಾ ವಿಕಾಸ ಪರಿಷತ್‌ನ ರಜತ ಸಂಭ್ರಮದ ವರ್ಷಾಚರಣೆಯ 5ನೇ ಕಾರ್ಯಕ್ರಮವಾದ 'ನಾಡದೇವಿಗೆ ನಮನ' ಸಮಾರಂಭದ ಸಂಗೀತ ಕಾರ್ಯಕ್ರಮದಲ್ಲಿ ಅವಳಿ ನಗರದ ಸಂಗೀತ ಪ್ರೇಮಿಗಳಿಗೆ ಭಾನ್ಸೂರಿ ವಾದನದ ಮೂಲಕ ನಾದಾಭಿಷೇಕ ಮಾಡಿಸಲಿದ್ದಾರೆ.

# ಸಮೀಕ್ಷಾದಾರರಿಗೆ ಗೌರವಧನ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಧಾರವಾಡ

2025-26ನೇ ಸಾಲಿನ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಜಿಲ್ಲೆಯಲ್ಲಿ ಸೆಪ್ಟೆಂಬರ್ 22, 2025ರಿಂದ ಅಕ್ಟೋಬರ್ 31, 2025ರವರೆಗೆ ಜರುಗಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ಅಂಗವಾಗಿ ಧಾರವಾಡ ಜಿಲ್ಲೆಯಲ್ಲಿ ಗಣತಿದಾರರಿಗೆ, ಮೇಲ್ವಿಚಾಕರಿಗೆ ತರಬೇತಿ ನೀಡಿದ ರಾಜ್ಯಮಟ್ಟದ (ಮಾಸ್ಟರ್) ತರಬೇತಿದಾರರಿಗೆ ಗೌರವಧನವನ್ನು ಪಾವತಿ ಮಾಡುವ ಕಾರ್ಯ ಡಿಸೆಂಬರ್ 12ರಿಂದ ಆರಂಭವಾಗಿದ್ದು, ಫಲಾನುಭವಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ನೇರವಾಗಿ ಗೌರವಧನ ಪಾವತಿಸುವ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಸಮೀಕ್ಷೆದಾರರ ಮೇಲೆ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸಿದ ಒಟ್ಟು 395 ಜನ ಮೇಲ್ವಿಚಾರಕರಿಗೆ ತಲಾ 10 ಸಾವಿರ ರೂ.ಗಳಂತೆ ಒಟ್ಟು 39,50,000 ರೂ.ಗಳು ಬಿಡುಗಡೆಯಾಗಿದೆ.

ಎಲ್ಲಾ ಮೇಲ್ವಿಚಾರಕರ ರೆಸಿಪಿಯಂಟ್ ಐ.ಡಿಗಳನ್ನು ಪಡೆಯಲಾಗಿದ್ದು, ಸದರಿಯವರಿಗೆ ಗೌರವಧನವನ್ನು ಪಾವತಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಸಿರುವ ಒಟ್ಟು 4,884 ಸಮೀಕ್ಷಾದಾರರಿಗೆ ಸಮೀಕ್ಷೆ ಕೈಗೊಂಡಿರುವ ಮನೆಗಳಿಗನುಗುಣವಾಗಿ ಗೌರವಧನ ಪಾವತಿಸಲು ರೂ.4,40,46,700 ಬಿಡುಗಡೆಯಾಗಿದ್ದು, ಎಲ್ಲಾ ಗಣತಿದಾರರ ರೆಸಿಪಿಯಂಟ್ ಐ.ಡಿಗಳನ್ನು ಪಡೆಯಲಾಗುತ್ತಿದೆ. ರೆಸಿಪಿಯಂಟ್ ಐ.ಡಿ ಒದಗಿಸಿರುವ 1,525 ಗಣತಿದಾರರಿಗೆ ಒಟ್ಟು ರೂ.1,57,62,500ಗಳನ್ನು ಪಾವತಿಸಲು ಈಗಾಗಲೇ ಕ್ರಮ ವಹಿಸಲಾಗಿದೆ.

ಉಳಿದ ಎಲ್ಲ ಗಣತಿದಾರರಿಗೂ ಗೌರವಧನ ಜಮಾ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಜಿಲ್ಲೆಯಲ್ಲಿ ಗಣತಿದಾರರಿಗೆ, ಮೇಲ್ವಿಚಾಕರಿಗೆ ತರಬೇತಿ ನೀಡಿದ 92 ಜನ (ಮಾಸ್ಟರ್) ತರಬೇತಿದಾರರಿಗೆ 4,72,500 ರೂ.ಗಳ ಗೌರವಧನವನ್ನು ಜಮೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಒಟ್ಟು 4,886 ಬ್ಲಾಕ್‌ಗಳನ್ನು ಸೃಜಿಸಲಾಗಿದ್ದು, ಪ್ರತಿ ಬ್ಲಾಕ್‌ಗೆ ತಲಾ ರೂ.5,000ಗಳಂತೆ ಒಟ್ಟು ರೂ.2,44,25,000 ಬಿಡುಗಡೆಯಾಗಿದ್ದು, ಸಂಬಂಧಪಟ್ಟ ಬ್ಲಾಕ್‌ಗಳಲ್ಲಿ ಕಾರ್ಯನಿರ್ವಹಿಸಿದ ಗಣತಿದಾರರಿಗೆ ಸದರಿ ಗೌರವಧನವನ್ನು ಪಾವತಿಸಬೇಕಾಗಿದೆ. ಆ ಬ್ಲಾಕ್‌ಗಳಲ್ಲಿ ಸಮೀಕ್ಷಾ ಕಾರ್ಯ ನಿರ್ವಹಿಸಿರುವ ಗಣತಿದಾರರ ಬ್ಲಾಕ್‌ವಾರು ಮಾಹಿತಿಗಳನ್ನು ಪಡೆಯುವ ಕಾರ್ಯ ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರೀ ವಾಹನಗಳ ಸಂಚಾರ ತಡೆದ ರೈತರು



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದಿಂದ ಹರ್ತಿ ಸಂಪರ್ಕಿಸುವ ನಮ್ಮ ಹೊಲ ನಮ್ಮ ರಸ್ತೆಯ ಮಾರ್ಗವಾಗಿ ಟಿಪ್ಪರ್ ಹಾಗೂ ಪವನ ವಿದ್ಯುತ್ ಕಂಪನಿಗೆ ಸೇರಿದ ಭಾರೀ ಗಾತ್ರದ ವಾಹನಗಳು ಓವರ್ ಲೋಡ್ ತುಂಬಿಕೊಂಡು ಸಂಚರಿಸುವುದರಿಂದ ರಸ್ತೆಗೆ ಹಾಕಿದ ಡಾಂಬರ್ ಕಿತ್ತು ಹದಗೆಟ್ಟು ಹೋಗಿದ್ದು, ರೈತರು ಇಂತಹ ವಾಹನಗಳನ್ನ ತಡೆದು ವಿದ್ಯುತ್ ಕಂಪನಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಮಾರ್ಗದ ಅಕ್ಕ-ಪಕ್ಕದ ಜಮೀನುಗಳಲ್ಲಿ ಪವನ ವಿದ್ಯುತ್ ಫ್ಯಾನ್ ಅಳವಡಿಸಲು ಪವನ ವಿದ್ಯುತ್ ಕಂಪನಿಗೆ ಸೇರಿದ ಭಾರೀ ಗಾತ್ರದ ವಾಹನಗಳು ಹಗಲು-ರಾತ್ರಿಯೆನ್ನದೇ ಸಂಚರಿಸಿದ್ದರಿಂದ ರಸ್ತೆಗೆ ಹಾಕಿದ ಡಾಂಬರ್ ಕಿತ್ತುಹೋಗಿ, ತಗ್ಗು-ಗುಂಡಿಗಳು ಬಿದ್ದು ರಸ್ತೆಯುದ್ದಕ್ಕೂ ರಸ್ತೆಗೆ ಹಾಕಿದ್ದ ಜಲ್ಲಿಕಲ್ಲುಗಳು ಹರಡಿಕೊಂಡಿದೆ. ಎತ್ತು, ದನಕರುಗಳು ಈ ಮಾರ್ಗದಲ್ಲಿ ನಡೆದುಕೊಂಡು ಹೋಗಲಾರದಂತಹ ಸ್ಥಿತಿ ನಿರ್ಮಾಣವಾಗಿದೆ. ರೈತರು, ದನಕರುಗಳು ಸಂಚರಿಸುವುದಕ್ಕೆ ರಸ್ತೆ ನಿರ್ಮಾಣ ಮಾಡಿದ್ದು, ಈ ನಮ್ಮ ಹೊಲ ನಮ್ಮ ರಸ್ತೆಯ ಸಾಮರ್ಥ್ಯ ಮೀರಿದ ಭಾರವನ್ನು ತುಂಬಿಕೊಂಡು ಸಂಚರಿಸುತ್ತಾರೆ. ಈ ರಸ್ತೆಯಲ್ಲಿ ಸಂಚರಿಸಲು ಇವರಿಗೆ ಯಾರು ಪರವಾನಿಗೆ ಕೊಟ್ಟಿದ್ದು, ಅಧಿಕಾರಿಗಳು ಕಣ್ಮುಚ್ಚಿ ಕುಳಿತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರಲ್ಲದೆ, ಈ ಮಾರ್ಗದಲ್ಲಿ ಭಾರೀ ಗಾತ್ರದ ವಾಹನಗಳು ಸಂಚರಿಸಲು ನಾವು ಅವಕಾಶ ಕೊಡುವುದಿಲ್ಲ ಎಂದು ಪಟ್ಟು ಹಿಡಿದರು.

ಈ ಸಂದರ್ಭದಲ್ಲಿ ರೈತರಾದ ಮಂಜುನಾಥ ಬಾತಾಖಾನಿ, ಜಗದೀಶ ಬಟ್ಟೂರ, ಸಂಗಮೇಶ ಮಟ್ಟಿ, ಗಂಗಾಧರ ಬಂದಕ್ಕನವರ, ಯಲ್ಲಪ್ಪ ಕಾಗಿ, ವಿರೂಪಾಕ್ಷಪ್ಪ ಕಣವಿ, ಮಲ್ಲಪ್ಪ ಭದ್ರಣ್ಣವರ ಸೇರಿದಂತೆ ಕಣವಿ, ಮುಳಗುಂದದ ರೈತರು ಇದ್ದರು.

### ಪ್ರಜಾಪ್ರಭುತ್ವದ ಸೌಂದರ್ಯ ಎಂದ ಕಾಂಗ್ರೆಸ್ ಸಂಸದ ಶಶಿ ತರೂರ್

## ಸ್ವಕ್ಷೇತ್ರ ತಿರುವನಂತಪುರದಲ್ಲಿ ಬಿಜೆಪಿ ಭರ್ಜರಿ ಗೆಲುವು



■ವಿಜಯಸಾಕ್ಷಿ ಸುದ್ದಿ, ಕೇರಳ

ಕೇರಳದ ಸ್ಥಳೀಯ ಸಂಸ್ಥೆ ಚುನಾವಣೆಯ ಫಲಿತಾಂಶ ಇಂದು (ಡಿ.13) ಪ್ರಕಟಗೊಂಡಿದ್ದು, ತಿರುವನಂತಪುರಂ ಮಹಾನಗರ ಪಾಲಿಕೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಭರ್ಜರಿ ಗೆಲುವು ದಾಖಲಿಸಿದೆ. ಈ ಮೂಲಕ 45 ವರ್ಷಗಳ ಸಿಪಿಐ(ಎಂ) ನೇತೃತ್ವದ ಎಲ್‌ಡಿಎಫ್ ಆಡಳಿತ ಕೊನೆಗೊಂಡಿದೆ.

ಕೇರಳ ರಾಜಧಾನಿಯಾದ ತಿರುವನಂತಪುರಂ ಮಹಾನಗರ ಪಾಲಿಕೆಯ 101 ಸ್ಥಾನಗಳ ಪೈಕಿ ಎನ್‌ಡಿಎ 50 ಸ್ಥಾನಗಳನ್ನು ಗೆದಿದ್ದೆ. ಮೊದಲ ಬಾರಿಗೆ ಇಷ್ಟು ದೊಡ್ಡ ಜನಾದೇಶವನ್ನು ಪಡೆದುಕೊಂಡಿದೆ.

ತಿರುವನಂತಪುರಂ ಕಾಂಗ್ರೆಸ್‌ನ ಹಿರಿಯ ನಾಯಕ ಹಾಗೂ ಸಂಸದ ಶಶಿ ತರೂರ್ ಅವರು ಪ್ರತಿನಿಧಿಸುವ ಕ್ಷೇತ್ರವಾಗಿದೆ.

ರಾಜ್ಯದಾದ್ಯಂತ ಗ್ರಾಮ, ತಾಲೂಕು ಹಾಗೂ ಜಿಲ್ಲಾ ಪಂಚಾಯತ್, ಪುರಸಭೆ ಮತ್ತು ಮಹಾನಗರ ಪಾಲಿಕೆಗಳಲ್ಲಿ ಒಟ್ಟಾರೆಯಾಗಿ ಕಾಂಗ್ರೆಸ್-ಮುಸ್ಲಿಂ ಲೀಗ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಹೆಚ್ಚಿನ ಸ್ಥಾನಗಳನ್ನು ಪಡೆದುಕೊಂಡಿದೆ.

ಶಶಿ ತರೂರ್ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತನ್ನ ಪಕ್ಷವಾದ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಗೆಲುವಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಜೊತೆಗೆ ತನ್ನ ತವರು ಕ್ಷೇತ್ರದಲ್ಲಿ ಗೆದ್ದ ಎನ್‌ಡಿಎಗೂ ಅಭಿನಂದನೆ ತಿಳಿಸಿದ್ದಾರೆ. ತಿರುವನಂತಪುರಂನಲ್ಲಿ ಎನ್‌ಡಿಎ ಗೆಲುವು "ಪ್ರಜಾಪಪ್ರಭುತ್ವದ ಸೌಂದರ್ಯ" ಎಂದಿದ್ದಾರೆ.

"45 ವರ್ಷಗಳ ಎಲ್‌ಡಿಎಫ್ ದುರಾಡಳಿತದ ಬದಲಾವಣೆಗಾಗಿ ನಾನು ಪ್ರಚಾರ ಮಾಡಿದ್ದೆ. ಆದರೆ, ಮತದಾರರು ಅಂತಿಮವಾಗಿ ಆಡಳಿತದಲ್ಲಿ ಸ್ಪಷ್ಟ ಬದಲಾವಣೆಯನ್ನು ಬಯಸಿದ ಮತ್ತೊಂದು ಪಕ್ಷಕ್ಕೆ ಪ್ರತಿಫಲ ನೀಡಿದ್ದಾರೆ. ಇದು ಪ್ರಜಾಪ್ರಭುತ್ವದ ಸೌಂದರ್ಯ. ಒಟ್ಟಾರೆಯಾಗಿ ಯುಡಿಎಫ್ ಆಗಿರಲಿ ಅಥವಾ ನನ್ನ ಕ್ಷೇತ್ರದಲ್ಲಿ ಬಿಜೆಪಿಯಾಗಿರಲಿ, ಜನರ ತೀರ್ಪನ್ನು ಗೌರವಿಸಬೇಕು" ಎಂದು ಶಶಿ ತರೂರ್ ಬರೆದುಕೊಂಡಿದ್ದಾರೆ.

ನಾವು ಕೇರಳದ ಅಭಿವೃದ್ಧಿಗಾಗಿ ಕೆಲಸ ಮಾಡುವುದನ್ನು ಮುಂದುವರಿಸುತ್ತೇವೆ.

ಜನರ ಅಗತ್ಯಗಳನ್ನು ಪೂರೈಸುತ್ತೇವೆ ಮತ್ತು ಉತ್ತಮ ಆಡಳಿತದ ತತ್ವಗಳನ್ನು ಎತ್ತಿಹಿಡಿಯುತ್ತೇವೆ ಎಂದಿದ್ದಾರೆ.

## ನಟಿಯ ಅಪಹರಣ, ಅತ್ಯಾಚಾರ ಪ್ರಕರಣ : ಆರು ಅಪರಾಧಿಗಳಿಗೆ 20 ವರ್ಷ ಕಠಿಣ ಜೈಲು ಶಿಕ್ಷೆ

■ವಿಜಯಸಾಕ್ಷಿ ಸುದ್ದಿ, ಕೇರಳ

ಮಲಯಾಳಂ ಮೂಲದ ಬಹುಭಾಷಾ ನಟಿಯ ಅಪಹರಣ ಮತ್ತು ಅತ್ಯಾಚಾರ ಪ್ರಕರಣದ (2017ರ ಪ್ರಕರಣ) ಆರು ಅಪರಾಧಿಗಳಿಗೆ ಇಪ್ಪತ್ತು ವರ್ಷಗಳ ಕಠಿಣ ಜೈಲು ಶಿಕ್ಷೆ ವಿಧಿಸಿ ಶುಕ್ರವಾರ (ಡಿಸೆಂಬರ್ 12) ಕೇರಳ ನ್ಯಾಯಾಲಯ ಆದೇಶಿಸಿದೆ.

ಡಿಸೆಂಬರ್ 8ರಂದು ಪ್ರಕರಣದ ತೀರ್ಪು ಪ್ರಕಟಿಸಿದ್ದ ಎರ್ನಾಕುಲಂ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶೆ ಹನಿ ಎಂ.ವರ್ಗೀಸ್, ಪ್ರಕರಣದ 8ನೇ ಆರೋಪಿಯಾಗಿದ್ದ ಮಲಯಾಳಂ ನಟ ದಿಲೀಪ್ ಅವರನ್ನು ಖುಲಾಸೆಗೊಳಿಸಿದ್ದರು.

ಉಳಿದ ಆರೋಪಿಗಳಾದ ಸುನಿಲ್ ಎನ್.ಎಸ್ ಅಲಿಯಾಸ್ ಪಲ್ಸರ್ ಸುನಿ, ಮಾರ್ಟಿನ್ ಆಂಟೋನಿ, ಮಣಿಕಂಠನ್ ಬಿ, ವಿಜೀಶ್ ವಿಪಿ, ಸಲೀಂ ಎಚ್ ಅಲಿಯಾಸ್ ವಡಿವಲ್ ಸಲೀಂ ಹಾಗೂ ಪ್ರದೀಪ್ ಅವರನ್ನು ದೋಷಿಗಳೆಂದು ಘೋಷಿಸಿದ್ದರು.

# 'ನರೇಗಾ' ಹೆಸರು ಬದಲಾವಣೆ, ಕೆಲಸದ ದಿನಗಳು ಹೆಚ್ಚಳಕ್ಕೆ ಕೇಂದ್ರ ಸಂಪುಟ ಅನುಮೋದನೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ಎಂಜಿಎನ್‌ಆರ್‌ಇಜಿಎ-ನರೇಗಾ)ಯನ್ನು 'ಪೂಜ್ಯ ಬಾಪು ಗ್ರಾಮೀಣ ರೋಜ್‌ಗಾರ್ ಯೋಜನೆ' ಎಂದು ಮರುನಾಮಕರಣ ಮಾಡಲು ಕೇಂದ್ರ ಸಚಿವ ಸಂಪುಟ ಶುಕ್ರವಾರ (ಡಿಸೆಂಬರ್ 12) ಅನುಮೋದನೆ ನೀಡಿದೆ.



ಸರ್ಕಾರ ಗ್ರಾಮೀಣ ಪ್ರದೇಶದ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ಒದಗಿಸುವ ಖಾತರಿಯುಕ್ತ ಉದ್ಯೋಗವನ್ನು ಪ್ರಸ್ತುತದ 100 ದಿನಗಳಿಂದ 125 ದಿನಗಳಿಗೆ ಏರಿಸಲು ನಿರ್ಧರಿಸಿದೆ. ಜೊತೆಗೆ, ಈ ಯೋಜನೆಯಡಿ ಕನಿಷ್ಠ ಕೂಲಿಯನ್ನು ದಿನಕ್ಕೆ 240 ರೂಪಾಯಿಗೆ ಮರುಪರಿಷ್ಕರಣೆ ಮಾಡಲು ಉದ್ದೇಶಿಸಿದೆ. ಈ ವಿಸ್ತರಿತ ಯೋಜನೆಯನ್ನು ಜಾರಿಗೆ ತರುವ ಸಲುವಾಗಿ ಹೆಚ್ಚುವರಿ ಬಜೆಟ್ ಅನುದಾನ ಒದಗಿಸಲು ತೀರ್ಮಾನಿಸಿದೆ.

ನರೇಗಾ ಯೋಜನೆಯಡಿ ಬಾಕಿ ಉಳಿದಿರುವ ರಾಜ್ಯದ ಪಾಲು ಸುಮಾರು 51,627 ಕೋಟಿ ರೂಪಾಯಿಗಳನ್ನು ತಕ್ಷಣ ಬಿಡುಗಡೆ ಮಾಡಬೇಕೆಂದು ಪಶ್ಚಿಮ ಬಂಗಾಳ ಸರ್ಕಾರ ಕೇಂದ್ರದ ಮೇಲೆ ಒತ್ತಡ ಹೇರುತ್ತಿರುವ ನಡುವೆ ಯೋಜನೆಯಲ್ಲಿ ಬದಲಾವಣೆಗಳನ್ನು ತರಲು ಕೇಂದ್ರ ಮುಂದಾಗಿದೆ.

ನರೇಗಾ ಹಣ ತಡೆಹಿಡಿದಿರುವುದರಿಂದ ಗ್ರಾಮೀಣ ಭಾಗದ ಕಾರ್ಮಿಕರಿಗೆ ಕೂಲಿ ಕೊಡುವುದೇ ನಿಂತುಹೋಗಿದೆ ಮತ್ತು ಚಾಲ್ತಿಯಲ್ಲಿರುವ ಅನೇಕ ಕಾಮಗಾರಿಗಳು ಸಂಪೂರ್ಣ ಸ್ಥಗಿತಗೊಂಡಿವೆ ಎಂದು ಪಶ್ಚಿಮ ಬಂಗಾಳ ಸರ್ಕಾರ ಹೇಳಿಕೊಂಡಿದೆ. ರಾಜಕೀಯ ದ್ವೇಷದಿಂದ ಕೇಂದ್ರ ಸರ್ಕಾರ ಹಣ ಬಿಡುಗಡೆ ಮಾಡುತ್ತಿಲ್ಲ ಎಂದು ಆರೋಪಿಸಿದೆ.

ನರೇಗಾ ಯೋಜನೆಯ ಅನುಷ್ಠಾನದಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಆರೋಪಿಸಿರುವ ಕೇಂದ್ರ, ಮಾರ್ಚ್ 9, 2022 ರಿಂದ ಪಶ್ಚಿಮ ಬಂಗಾಳದಲ್ಲಿ ಯೋಜನೆಗೆ ಹಣಕಾಸು ಒದಗಿಸುವುದನ್ನು ನಿಲ್ಲಿಸಿದೆ. ಬಾಕಿ ಪಾವತಿಸುವಂತೆ ಒತ್ತಾಯಿಸಿ ಪಶ್ಚಿಮ ಬಂಗಾಳ ಸರ್ಕಾರ ಕಾನೂನು ಹೋರಾಟ ನಡೆಸುತ್ತಿದೆ.

ಆಗಸ್ಟ್ 1,2025ರಿಂದ ಪಶ್ಚಿಮ ಬಂಗಾಳದಲ್ಲಿ ನರೇಗಾ ಯೋಜನೆಯನ್ನು ಪುನರ್ ಅನುಷ್ಠಾನಗೊಳಿಸುವಂತೆ ನಿರ್ದೇಶಿಸಿದ ಕಲ್ಕತ್ತಾ ಹೈಕೋರ್ಟ್ ಜೂನ್ 18,2025ರಂದು ಆದೇಶಿಸಿತ್ತು. ಅದನ್ನು ಪ್ರಶ್ನಿಸಿ ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿತ್ತು. ಅಕ್ಟೋಬರ್ 27, 2025ರಂದು ಕೇಂದ್ರದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿತ್ತು. ರಾಜ್ಯದಲ್ಲಿ ಯೋಜನೆಯ ಅನುಷ್ಠಾನಕ್ಕೆ 'ವಿಶೇಷ ಷರತ್ತುಗಳನ್ನು' ವಿಧಿಸುವ ಅಧಿಕಾರವನ್ನು ಹೈಕೋರ್ಟ್ ಕೇಂದ್ರಕ್ಕೆ ಬಿಟ್ಟಿತ್ತು.

ಜೂನ್ 18ರ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಜುಲೈ 31ರಂದು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ವಿಶೇಷ ರಜಾ ಅವಧಿಯ ಅರ್ಜಿ ಸಲ್ಲಿಸಿತ್ತು. ಆದರೆ, ಅದರ ಮರುದಿನ ಆಗಸ್ಟ್ 1ರಂದು ಯೋಜನೆ ಪುನರಾರಂಭಿಸುವಂತೆ ಹೈಕೋರ್ಟ್ ಸೂಚಿಸಿತ್ತು. ಆ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಆಗಸ್ಟ್ 2025ರಿಂದ ಯೋಜನೆಯನ್ನು ಪುನರ್ ಅನುಷ್ಠಾನಗೊಳಿಸುವಾಗ, ಯಾವುದೇ ಅಕ್ರಮಗಳು ಸಂಭವಿಸದಂತೆ ನೋಡಿಕೊಳ್ಳಲು ದೇಶದ ಇತರ ರಾಜ್ಯಗಳಲ್ಲಿ ಇರುವಂತೆ ವಿಶೇಷ ಷರತ್ತುಗಳು, ನಿರ್ಬಂಧಗಳು ಮತ್ತು ನಿಯಮಗಳು ಇತ್ಯಾದಿಗಳನ್ನು ವಿಧಿಸಲು ಕೇಂದ್ರ ಸರ್ಕಾರ ಸಂಪೂರ್ಣ ಅಧಿಕಾರ ಹೊಂದಿದೆ ಎಂದು ಹೈಕೋರ್ಟ್ ತನ್ನ ಆದೇಶದಲ್ಲಿ ಹೇಳಿತ್ತು.

ಸುಪ್ರೀಂ ಕೋರ್ಟ್‌ನಲ್ಲಿ ಹಿನ್ನಡೆಯಾದ ಕಾರಣ, ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವಾಲಯ ಪಶ್ಚಿಮ ಬಂಗಾಳದಲ್ಲಿ ವಿಶೇಷ ಷರತ್ತುಗಳೊಂದಿಗೆ ನರೇಗಾ ಯೋಜನೆಯನ್ನು ಪುನರಾರಂಭಿಸಲು ಮುಂದಾಗಿದೆ ಎಂದು ಇಂಡಿಯನ್ ಎಕ್ಸ್‌ಪ್ರೆಸ್ ನವೆಂಬರ್‌ನಲ್ಲಿ ವರದಿ ಮಾಡಿತ್ತು.

ಕೇಂದ್ರ ಸರ್ಕಾರದ ನಿರ್ದೇಶನಗಳನ್ನು ಪಾಲಿಸದ ಕಾರಣ 2005ರ ನರೇಗಾ ಕಾಯ್ದೆಯ ಸೆಕ್ಷನ್ 27 ಅನ್ನು ಅನ್ವಯಿಸಿ ಕೇಂದ್ರ ಸರ್ಕಾರ ಮಾರ್ಚ್ 9, 2022ರಿಂದ ಪಶ್ಚಿಮ ಬಂಗಾಳಕ್ಕೆ ಯೋಜನೆಯ ಹಣ ಬಿಡುಗಡೆ ಮಾಡುವುದನ್ನು ಸ್ಥಗಿತಗೊಳಿಸಿದೆ. ಅಂದಿನಿಂದ, ಯೋಜನೆಯಡಿಯಲ್ಲಿ ರಾಜ್ಯದಲ್ಲಿ ಯಾವುದೇ ಕೆಲಸ ನಡೆದಿಲ್ಲ.

ಈ ಯೋಜನೆಯನ್ನು ಸ್ಥಗಿತಗೊಳಿಸುವ ಮೊದಲು, 2014-15 ಮತ್ತು 2021-22 ರ ನಡುವೆ ಪಶ್ಚಿಮ ಬಂಗಾಳದ 51 ಲಕ್ಷದಿಂದ 80 ಲಕ್ಷ ಕುಟುಂಬಗಳು ವಾರ್ಷಿಕವಾಗಿ ಯೋಜನೆಯ ಲಾಭ ಪಡೆಯುತ್ತಿದ್ದವು.

## ಆರೋಗ್ಯಕರ ಜೀವನ ಶೈಲಿ ರೂಢಿಸಿಕೊಳ್ಳಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಮಲ್ಲಸಮುದ್ರ ಗ್ರಾಮದ ಗ್ರಂಥಾಲಯದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಅಡಿಯಲ್ಲಿ ಜ್ಞಾನವಿಕಾಸ ಕಾರ್ಯಕ್ರಮ ನಡೆಯಿತು.

ಆರೋಗ್ಯ ಮತ್ತು ನೈರ್ಮಲ್ಯ ಕುರಿತು ಜಾನಪದ ಗಾಯಕರಾದ ಮಂಜುನಾಥ ಸಜ್ಜನರ ಮಾತನಾಡಿ, ಆರೋಗ್ಯಕರ ಜೀವನ ಶೈಲಿಯನ್ನು ರೂಢಿಸಿಕೊಂಡು ಆರೋಗ್ಯ ಭಾಗ್ಯವನ್ನು ಕಾಪಾಡಿಕೊಳ್ಳಬೇಕು. ದುಶ್ಚಟಗಳಿಂದ ದೂರವಿರಿ, ಮೊಬೈಲ್ ಅತೀ ಬಳಕೆ ಬೇಡ. ಯೋಗ, ಧ್ಯಾನ, ವಾಕಿಂಗ್ ಮಾಡುವುದರಿಂದ ಆಗುವ ಲಾಭಗಳ ಕುರಿತು ತಿಳಿಸಿದರಲ್ಲದೆ, ಪೌಷ್ಟಿಕ ಆಹಾರ, ಸರಿಯಾದ ಆಹಾರ ಸೇವನೆಯ ಮಹತ್ವ ಹೇಳಿದರು.

ಕೀಟಜನ್ಯ ರೋಗಗಳ ನಿಯಂತ್ರಣದಲ್ಲಿ ಸಾರ್ವಜನಿಕರ ಪಾತ್ರದ ಕುರಿತು ಪರಿಸರ ಹಾಗೂ ವೈಯಕ್ತಿಕ ಶುಚಿತ್ವದಿಂದ ಆಗುವ ಪ್ರಯೋಜನಗಳ ಕುರಿತು, ನೆಲ, ಜಲ, ಮಣ್ಣುಗಳ ಮಲಿನತೆಯಿಂದ ಆಗುವ ದುಷ್ಪರಿಣಾಮಗಳ ಕುರಿತು, ತಡೆಗಟ್ಟುವ ವಿಧಾನಗಳ ಕುರಿತು ಉಪನ್ಯಾಸ ನೀಡಿದರು.

ಜ್ಞಾನವಿಕಾಸ ಸಮನ್ವಯ ಅಧಿಕಾರಿ ಗಂಗಮ್ಮ ಮರಾಠಿ ಮಾತನಾಡಿ, ರೋಗ ಬಂದ ಮೇಲೆ ಚಿಕಿತ್ಸೆ ಪಡೆಯುವುದಕ್ಕಿಂತ ತಡೆಗಟ್ಟುವಿಕೆ ಉತ್ತಮ ಎಂದರಲ್ಲದೆ, ಅಂಗಾಂಗ ದಾನ, ರಕ್ತದಾನದ ಕುರಿತು ತಿಳಿಸಿದರು.

ಶ್ರೀ ಚೌಡೇಶ್ವರಿ ಕಾರ್ತಿಕೋತ್ಸವದ ಅಂಗವಾಗಿ ಜನ ಜಾಗೃತಿ ಧರ್ಮ ಸಮಾರಂಭ

# ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಬೇಕು

**■ ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ದೇವರು ಎಲ್ಲರಲ್ಲಿ ಇದ್ದರೂ ದೇವರಲ್ಲಿ ಎಲ್ಲರೂ ಇಲ್ಲ. ಭಗವಂತನಿತ್ತ ಸಂಪತ್ತು ಬಾಳಿನ ಅಮೂಲ್ಯ ಸಂಪತ್ತು. ಭಕ್ತ ಭಗವಂತನೆಡೆಗೆ ಹೋದಾಗ ಜೀವನ ಪಾವನ. ದೇವರ ಮೇಲಿನ ನಂಬಿಕೆ ಮನುಷ್ಯನ ಬಾಳಿಗೆ ನಂದಾದೀಪ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಲೆನಿನ್ ನಗರದ ಐ.ಟಿ.ಐ ಕಾಲೇಜು ಆವರಣದಲ್ಲಿರುವ ಗ್ರಾಮದೇವತೆ ಶ್ರೀ ಚೌಡೇಶ್ವರಿ ಕಾರ್ತಿಕೋತ್ಸವದ ಅಂಗವಾಗಿ ಜರುಗಿದ ಜನ ಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಮಸ್ತ ಜನರ ಭೋಗ–ಮೋಕ್ಷಗಳಿಗೆ ಧರ್ಮವೇ ಮೂಲ. ಬಾಳಿನ ಭಾಗ್ಯೋದಯಕ್ಕೆ ಧರ್ಮದ ಬೆಳಕು ಬೇಕು. ಮನುಷ್ಯ ಜೀವನವನ್ನು ಸುಂದರ ಮತ್ತು ಶುದ್ಧಗೊಳಿಸುವುದೇ ಧರ್ಮದ ಗುರಿ. ಹೆತ್ತ ತಾಯಿ, ಹೊತ್ತ ಭೂಮಿ ಮನುಷ್ಯನಿಗೆ ಎಷ್ಟು ಮುಖ್ಯವೋ ಅಷ್ಟೇ ಧರ್ಮವೂ ಮುಖ್ಯವಾಗಿದೆ. ಸಂಪತ್ತು ಬೆಳೆದಂತೆ ಸಭ್ಯತೆ, ಸಂಸ್ಕೃತಿ ಬೆಳೆಯಬೇಕು. ಶಿವ ಶಕ್ತಿಯಿಂದ ಈ ಜಗತ್ತು ನಿರ್ಮಾಣಗೊಂಡಿದೆ. ಶಿವನ ಆರಾಧನೆ ಎಷ್ಟು ಪ್ರಾಚೀನವೋ ಅಷ್ಟೇ ಶಕ್ತಿ ಆರಾಧನೆ ಪ್ರಾಚೀನವಾಗಿದೆ. ಶಿವನ ಬಿಟ್ಟು ಶಕ್ತಿ, ಶಕ್ತಿ ಬಿಟ್ಟು ಶಿವನಿಲ್ಲದ ಕಾರಣ ಶ್ರೀ ಜಗದ್ಗುರು ರೇಣುಕಾಚಾರ್ಯರು 'ಶಕ್ತಿ ವಿಶಿಷ್ಟಾದ್ವೈತ ಸಿದ್ಧಾಂತ'ವನ್ನು ಬೋಧಿಸಿ ಉದ್ಧರಿಸಿದ್ದಾರೆ. ಜ್ಞಾನ ಕ್ರಿಯಾತ್ಮಕವಾದ ಧರ್ಮ ಪಾಲನೆಯಿಂದ ಜಗದಲ್ಲಿ ಶಾಂತಿ ನೆಲೆಸಲು ಸಾಧ್ಯ. ಶ್ರೀ ಚೌಡೇಶ್ವರಿ ದೇವಸ್ಥಾನ ಟ್ರಸ್ಟಿನವರು ಪ್ರತಿ ವರ್ಷ ಅತ್ಯಂತ ವೈಭವದಿಂದ ಕಾರ್ತಿಕ ದೀಪೋತ್ಸವ ಆಚರಿಸುತ್ತಿರುವುದು ಅವರಲ್ಲಿರುವ ಧರ್ಮ ಶ್ರದ್ಧೆಗೆ ಸಾಕ್ಷಿಯಾಗಿದೆ ಎಂದು ಹರುಷ ವ್ಯಕ್ತಪಡಿಸಿದರು.



ದಾವಣಗೆರೆ–ಹರಿಹರ ಅರ್ಬನ್ ಸಹಕಾರಿ ಬ್ಯಾಂಕಿನ ಅಧ್ಯಕ್ಷ ಎನ್.ಎ. ಮುರುಗೇಶ ಸಮಾರಂಭ ಉದ್ಘಾಟಿಸಿ ಮಾತನಾಡಿ, ಭೌತಿಕ ಜೀವನ ಸಮೃದ್ಧಗೊಂಡಂತೆ ಆಂತರಿಕ ಜೀವನ ಪರಿಶುದ್ಧಗೊಳ್ಳಬೇಕಾಗಿದೆ. ಶ್ರದ್ಧೆ ಇದ್ದರೆ ಧರ್ಮ, ಸಂಸ್ಕೃತಿ ಉಳಿಯಲು ಸಾಧ್ಯ. ವೈಚಾರಿಕತೆಯ ಹೆಸರಿನಲ್ಲಿ ನಮ್ಮ ನಾಡಿನ ಸಂಸ್ಕೃತಿ ನಾಶವಾಗಬಾರದೆಂದರು.

> ನೇತೃತ್ವ ವಹಿಸಿದ ಆವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಸಂಪಾದಿಸಿಕೊಳ್ಳದಿದ್ದರೆ ಜೀವನ ವ್ಯರ್ಥ. ಹೊರಗಿನ ಕತ್ತಲೆ ಕಳೆಯಲು ದೀಪ ಬೇಕು. ಅಂತರಂಗದ ಕತ್ತಲೆ ಕಳೆಯಲು ಗುರು ಬೋಧೆ ಮುಖ್ಯವೆಂದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಬಿ.ಎಂ. ವಾಗೀಶಸ್ವಾಮಿ ಮಾತನಾಡಿ, ಹಿರಿಯರ ಮೌಲ್ಯಾಧಾರಿತ ಚಿಂತನಗಳು ಬಾಳಿನ ಆಶಾ ಕಿರಣ. ನಮ್ಮ ಬದುಕು ಇನ್ನೊಬ್ಬರಿಗೆ ಮಾದರಿಯಾಗಬೇಕಲ್ಲದೇ ಮಾರಕವಾಗಬಾರದೆಂದರು.

ಅ.ಭಾ.ವೀ.ಲಿಂ ಮಹಾಸಭೆಯ ಜಿಲ್ಲಾ ಘಟಕದ ಗೌರವಾಧ್ಯಕ್ಷ ಎಸ್.ಜಿ. ಉಳವಯ್ಯ, ಎಸ್. ಜೆ. ಶ್ರೀಧರ, ಅಕ್ಕಿ ರಾಜು, ಮಾಜಿ ದೂಡಾ ಅಧ್ಯಕ್ಷ ಕೆ.ಎಂ. ಸುರೇಶ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಸಾರೋಟ ಭವ್ಯ ಮೆರವಣಿಗೆಯೊಂದಿಗೆ ಬರಮಾಡಿಕೊಂಡರು. ಕುಂಭ ಹೊತ್ತ ಮಹಿಳೆಯರು, ಆರತಿ ಹಿಡಿದ ಸುಮಂಗಲೆಯರು, ಜಾನಪದ ಕಲಾತಂಡಗಳು ಉತ್ಸವದಲ್ಲಿ ಪಾಲ್ಗೊಂಡು ಮೆರವಣಿಗೆಗೆ ಶೋಭೆ ತಂದರು. ಸಮಾರಂಭದ ನಂತರ ಸಕಲ ಸದ್ಭಕ್ತರಿಗೂ ಅನ್ನ ದಾಸೋಹ ಜರುಗಿತು.

# ವಿಕೇಂದ್ರೀಕರಣ ಸೂಚ್ಯಂಕದಲ್ಲಿ ಉನ್ನತ ಸ್ಥಾನದಲ್ಲಿರುತ್ತೇವೆ

▶▶ ಮೊದಲನೇ ಪುಟದಿಂದ

ಸುಬೋಧ್ ಕಾಂತ್ ಸಾಹಾಯ್ ಮಾತನಾಡಿ, ಭಾರತದ ದೇಶದಲ್ಲಿ ವಿಕೇಂದ್ರೀಕೃತ ಆಡಳಿತ ಮತ್ತು ಜನ ಸಹಭಾಗಿತ್ವವನ್ನು ಬಲಪಡಿಸಲು ಪಂಚಾಯತ್ ರಾಜ್ ವ್ಯವಸ್ಥೆಯ ಅಭಿವೃದ್ಧಿಗೆ ಸರ್ಕಾರ ಕ್ರಮಬದ್ಧ ನೀತಿಗಳನ್ನು ಅನುಸರಿಸಿತು. ಬಲವಂತರಾಯ್ ಮೇಹ್ತಾ ಸಮಿತಿಯು ಮೂರು ಹಂತದ ಪಂಚಾಯತ್ ರಾಜ್ ವ್ಯವಸ್ಥೆಗೆ ಮೂಲಭೂತ ರೂಪುರೇಷೆ ನೀಡಿದರೆ, ಅಶೋಕ್ ಮೇಹ್ತಾ ಮತ್ತು ಎಲ್.ಎಂ. ಸಿಂಗ್ವಿ ಸಮಿತಿಗಳು ಸಂಸ್ಥಾತ್ಮಕ ಸ್ವಾಯತ್ತತೆ ಮತ್ತು ಪ್ರಜಾಸತ್ತಾತ್ಮಕ ಸ್ಥಿರತೆಯ ದೃಢತೆಗೆ ಅಗತ್ಯವಾದ ಮಹತ್ವದ ಶಿಫಾರಸುಗಳನ್ನುಮಾಡಿದವು. ಈ ಶಿಫಾರಸುಗಳ ಆಧಾರದಲ್ಲಿ ದಿವಂಗತ ಪ್ರಧಾನಮಂತ್ರಿ ರಾಜೀವ್ ಗಾಂಧಿಯವರು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಸಂವಿಧಾನಬದ್ಧ ಸ್ಥಾನಮಾನ ನೀಡುವ ಐತಿಹಾಸಿಕ ನಿರ್ಧಾರವನ್ನು ಕೈಗೊಂಡು, ಗ್ರಾಮಮಟ್ಟದ ಆಡಳಿತವನ್ನು ಭಾರತದ ಜನತಾಂತ್ರಿಕ ವ್ಯವಸ್ಥೆಯ ಆಧಾರಸ್ತಂಭವಾಗಿ ಬಲಪಡಿಸುವ ಅಡಿಪಾಯ ಹಾಕಿದರು ಎಂದರು.

ಗ್ರಾಮೀಣ ಪುನರ್ನಿರ್ಮಾಣದ ದೃಢನಿಶ್ಚಯದ ಧ್ಯೇಯವನ್ನು ಪ್ರಾರಂಭಿಸೋಣ, ಈ ಹಳ್ಳಿಗಳನ್ನು ಹೆಣಗಾಡುತ್ತಿರುವ ಹಳ್ಳಿಗಳಿಂದ ರಾಷ್ಟ್ರೀಯ ಶಕ್ತಿ ಮತ್ತು ಸ್ವಾವಲಂಬನೆಯ ದಾರಿದೀಪಗಳಾಗಿ ಪರಿವರ್ತಿಸೋಣ. ಗ್ರಾಮೀಣ ವ್ಯಕ್ತಿಯ ಜೀವನವು ನಮ್ಮ ಪ್ರಜಾಪ್ರಭುತ್ವದ ಅಗ್ನಿ ಪರೀಕ್ಷೆಯಾಗಿದೆ. ನಾವು ಅವರ ಅಸ್ತಿತ್ವವನ್ನು ಸ್ವಲ್ಪ ಮಟ್ಟಿಗೆ ಮಾತ್ರವಲ್ಲದೆ, ಆರಾಮದಾಯಕ, ಸಂಪೂರ್ಣವಾಗಿ ಘನತೆ ಮತ್ತು ಸಂತೋಷದ ಜೀವನವನ್ನು ಖಾತರಿಪಡಿಸುವ ಮಾನದಂಡಕ್ಕೆ ಏರಿಸಲು ಪ್ರತಿಜ್ಞೆ ಮಾಡೋಣ ಎಂದರು.

5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ.ನಾರಾಯಣಸ್ವಾಮಿ ಮಾತನಾಡಿ, ಗ್ರಾಮಗಳು ಅಭಿವೃದ್ಧಿಯಾದರೆ ದೇಶದ ಅಭಿವೃದ್ಧಿಯಾಗುತ್ತದೆ. ಹಾಗಾಗಿ ಗ್ರಾಮ ಪಂಚಾಯತ ಅಧ್ಯಕ್ಷರಿಗೆ ದೊರೆಯುವ ಹಣವನ್ನು ಹೇಗೆ ಉಪಯೋಗ ಮಾಡಬೇಕೆಂಬ ಅರಿವು ಮೂಡಬೇಕು. ಅಂದಾಗ ಮಾತ್ರ ಸ್ವಾವಲಂಬನೆಯ ಗ್ರಾಮಗಳನ್ನು ನಿರ್ಮಿಸಬಹುದು ಎಂದರು.

ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ ಕಾರ್ಯಕಾರಿ ಅಧ್ಯಕ್ಷ ವಿ.ವೈ. ಘೋರ್ಪಡೆ ಮಾತನಾಡಿ, ನಾವು ಇನ್ನು 73 ಮತ್ತು 74ನೇ ಕಾಯ್ದೆಗಳ ಕುರಿತು ಮಾಹಿತಿ ನೀಡಿದ್ದೇ ಸಾಕು, ಕಾಯ್ದೆಗಳಲ್ಲಿನ ಆಶಯಗಳು ವಾಸ್ತವವಾಗಿ ಹೇಗೆ ಜಾರಿಗೊಳಿಸಬೇಕೆಂಬುದನ್ನು ಚರ್ಚಿಸಿ ನೈಜ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಾಗಿದೆ ಎಂದರು. ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ನಮ್ಮ ಜಿಲ್ಲೆ ಕ್ರೀಡೆ, ಸಾಹಿತ್ಯ, ಸಂಗೀತ ಕ್ಷೇತ್ರಗಳಿಗೆ ಅಪಾರ ಕೊಡುಗೆ ನೀಡಿದೆ. ಈ ಸಮ್ಮೇಳನದಲ್ಲಿ ವಿವಿಧ ಸಮಸ್ಯೆಗಳಿಗೆ ಬೇರೆ ರಾಜ್ಯದಲ್ಲಿ ಯಾವ ರೀತಿ ಪರಿಹಾರವನ್ನು ಕಂಡುಕೊಂಡಿದ್ದಾರೆ ಎಂದು ಚರ್ಚಿಸಬಹುದಾಗಿದೆ. ಆಡಳಿತದಲ್ಲಿರುವ ಸಮಸ್ಯೆಗಳನ್ನು ಒಳಗೊಂಡಂತೆ ಎಲ್ಲಾ ರೀತಿಯ ಮಾಹಿತಿ ಪಡೆಯಲು ಮುಕ್ತ ಅವಕಾಶವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕೃತ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ.ಆರ್. ಪಾಟೀಲ, ತ್ರಿಪುರ ರಾಜ್ಯದ ಶಾಸಕ ರಾಜೀವ ಸಿನ್ಹ, ಪಂಚಾಯತ್ ಪರಿಷತ್ ಕಾರ್ಯದರ್ಶಿ ಅಶೋಕ ಚೌಹಾಣ, ವಾಸಣ್ಣ ಕುರಡಗಿ, ಶಿವಾನಂದ ಶೇಟ್ಟರ್, ಜೀವನ ಕುಮಾರ, ಕೆ. ನವೀನ್, ಡಾ. ಸಿ.ನಾರಾಯಣಸ್ವಾಮಿ, ಎಸ್. ಎಸ್. ಮೀನಾಕ್ಷಿ ಸುಂದರಂ, ಕೆ. ಯೆಲ್ಲಕ್ಕಿ ಗೌಡ, ನೀಲಕಂಠಪ್ಪ ಕುಸಗುರು ಸೇರಿದಂತೆ ವಿವಿಧ ರಾಜ್ಯದಗಳಿಂದ ಆಗಮಿಸಿದ ಗ್ರಾ.ಪಂ ಅಧ್ಯಕ್ಷರು ಹಾಜರಿದ್ದರು. ಆರ್‌ಡಿಪಿಆರ್ ಕುಲಪತಿ (ಪ್ರ) ಹಾಗೂ ಕುಲಸಚಿವರಾದ ಪ್ರೊ. ಡಾ. ಸುರೇಶ ವಿ.ನಾಡಗೌಡ ಸ್ವಾಗತಿಸಿದರು, ಬಾಹುಬಲಿ ಜೈನರ ಕಾರ್ಯಕ್ರಮ ನಿರ್ವಹಿಸಿದರು.

## ವಿದ್ಯಾರ್ಥಿಗಳಿಗೆ ಉಚಿತ ಪುಸ್ತಕ ವಿತರಣೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಕಾರ್ಮಿಕ ಕಲ್ಯಾಣ ಸಂಸ್ಥೆಯ ವತಿಯಿಂದ ಶಾಸ್ತ್ರೀಜಿ ಅನುದಾನಿತ ಪ್ರೌಢಶಾಲೆ ಕನ್ನಡ ಮಾಧ್ಯಮ 10ನೇ ತರಗತಿ ವಿದ್ಯಾರ್ಥಿಗಳಿಗೆ ಎಲ್‌ಬಿಎ ಕನ್ನಡ ಕೈಪಿಡಿ ಮತ್ತು 6 ವಿಷಯಗಳ ಮಾದರಿ ಪ್ರಶ್ನೆಗಳ ಕೈಪಿಡಿಗಳನ್ನು ಉಚಿತವಾಗಿ ವಿತರಣೆ ಮಾಡಲಾಗಿದೆ ಎಂದು ಸಂಸ್ಥೆಯ ಆಡಳಿತಾಧಿಕಾರಿ ಡಾ. ದಾವಲಬಿ ನದಾಫ್ ತಿಳಿಸಿದ್ದಾರೆ.

ಗದಗ ಶಹರ ವಲಯದ ಬಿಆರ್‌ಪಿ (ಪ್ರೌಢ) ವಿಭಾಗದ ಅಧಿಕಾರಿ ಹಾಗೂ ಶಾಲೆಯ ನೋಡಲ್ ಅಧಿಕಾರಿ ಎಂ.ಎ. ಯರಗುಡಿ ಮಾತನಾಡಿ, ಈ ಪುಸ್ತಕಗಳು 10ನೇ ತರಗತಿಯ ವಿದ್ಯಾರ್ಥಿಗಳ ಪರೀಕ್ಷೆಗಳಿಗೆ ಪೂರಕವಾಗಿವೆ. ವಿದ್ಯಾರ್ಥಿಗಳು ತಮ್ಮ ನಿಶ್ಚಿತವಾದ ಗುರಿಯೊಂದಿಗೆ ತಮ್ಮ ಭವಿಷ್ಯ ನಿರ್ಮಾಣ ಮಾಡಿಕೊಳ್ಳುವ ಕುರಿತು ಗಮನ ಹರಿಸಬೇಕು ಎಂದರು.

ಶಾಲೆಯ ಮುಖ್ಯೋಪಾಧ್ಯಾಯ ನೂರಅಹ್ಮದ ನಾಗನೂರ ಮಾತನಾಡಿ, ಕಾರ್ಮಿಕ ಕಲ್ಯಾಣ ಸಂಸ್ಥೆಯ ಮೂಲಕ ಮಕ್ಕಳಿಗೆ ಪುಸ್ತಕಗಳನ್ನು ಕೊಡಿಸಲು ಎಂ.ಎ. ಯರಗುಡಿ ಅವರು ಪ್ರಮುಖ ಪಾತ್ರ ವಹಿಸಿದ್ದು, ಅವರಿಗೆ ಶಾಲೆಯ ಶಿಕ್ಷಕರ ಪರವಾಗಿ ಧನ್ಯವಾದಗಳನ್ನು ಸಲ್ಲಿಸಿದರು.

ಸಂಸ್ಥೆಯ ಅಧ್ಯಕ್ಷ ಇರ್ಫಾನ್ ಡಂಬಳ ಮಾತನಾಡಿ, ಬಡಮಕ್ಕಳ ಶಿಕ್ಷಣವನ್ನು ಉತ್ತೇಜಿಸುವುದು, ಮಾತೃಭಾಷೆಯಲ್ಲಿ ಶಿಕ್ಷಣವನ್ನು ಪ್ರೋತ್ಸಾಹಿಸುವುದು, ಓದಿನ ವಾತಾವರಣವನ್ನು ಸೃಷ್ಟಿಸುವುದು ಮತ್ತು ಸಮಗ್ರ ಮಾನವ ಯೋಗಕ್ಷೇಮಕ್ಕಾಗಿ ಸುಸ್ಥಿರತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಲಾಗಿದೆ ಎಂದು ತಿಳಿಸಿದರು.

ನಾಸೀರ ಚಿಕ್ಕೆನಕೊಪ್ಪ ಮಾತನಾಡಿದರು. ಕಾರ್ಯಕ್ರಮದಲ್ಲಿ ಚ.ಆ. ಬೇಲೇರಿ, ಮಲ್ಲಪ್ಪ ಜೀವಣ್ಣವರ್, ಭೀಮಪ್ಪ ಪೂಜಾರ್ ಮೊಹಮ್ಮದ್ ಯೂಸುಫ್ ಬೆಪಾರಿ, ನಿಂಗಪ್ಪ ಕಟ್ಟಿಮನಿ, ಖಾಜಾಸಾಬ್ ಗಬ್ಬೂರ್, ಸಲೀಂ ಕಾತರಕಿ, ದುರ್ಗಪ್ಪ ಗುಡಿಮನಿ ಸೇರಿದಂತೆ ಕಾರ್ಮಿಕ ಕಲ್ಯಾಣ ಸಂಸ್ಥೆಯ ಸರ್ವ ಸದಸ್ಯರು, ಶಾಲೆಯ ಮೇಲ್ವಿಚಾರಕಿ ಇರಂ ಫರಹೀನ್, ಶಿಕ್ಷಕ ಬಳಗ, ವಿದ್ಯಾರ್ಥಿಗಳು, ಚಿತ್ರಕಲಾ ಶಿಕ್ಷಕರಾದ ಎಸ್.ಎಂ. ಕೋರಿ, ಎಸ್.ಎಂ. ಚಿಕ್ಕಣ್ಣವರ ಉಪಸ್ಥಿತರಿದ್ದರು. ದೈಹಿಕ ಶಿಕ್ಷಕ ಆರ್.ಎಚ್. ಅಸೂಟಿ ನಿರೂಪಿಸಿದರು. ಬಿ.ಎಚ್. ಜೋಗಿನ ವಂದಿಸಿದರು.

## ಶಾಸ್ತ್ರೀಯ ನೃತ್ಯದಲ್ಲಿ ವಲಯ ಮಟ್ಟಕ್ಕೆ ಆಯ್ಕೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಜರುಗಿದ ಕಲಾ ಪ್ರತಿಭೋತ್ಸವ–2025ರಲ್ಲಿ ಗದಗ ಕೆ.ಎಲ್.ಇ ಹೈಸ್ಕೂಲ್‌ನ ವಿದ್ಯಾರ್ಥಿನಿ ದೃತಿ ಪ್ರವೀಣ ವಾರಕರ ವಿಭಾಗದ ಶಾಸ್ತ್ರೀಯ ನೃತ್ಯದಲ್ಲಿ ಪ್ರಥಮ ಸ್ಥಾನ ಪಡೆದು ವಲಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಪ್ರತಿಭಾನ್ವಿತ ವಿದ್ಯಾರ್ಥಿನಿ ದೃತಿ ವಾರಕರ ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದು, ವಲಯ ಮಟ್ಟದಲ್ಲೂ ತನ್ನ ಪ್ರತಿಭೆಯನ್ನು ಅನಾವರಣಗೊಳಿಸಲಿ ಎಂದು ಶಾಲೆಯ ಮುಖ್ಯೋಪಾಧ್ಯಾಯ ಮತ್ತು ಶಿಕ್ಷಕ ಬಳಗ, ವಿದ್ಯಾರ್ಥಿಗಳು ಶುಭ ಕೋರಿದ್ದಾರೆ.

## ದಸ್ತಾವೇಜು ಬರಹಗಾರರ ಬೇಡಿಕೆಗಳ ಈಡೇರಿಕೆಗೆ ಧರಣಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ದಸ್ತಾವೇಜು ಬರಹಗಾರರಿಗೆ ಹಾಗೂ ವಕೀಲರಿಗೆ ಪ್ರತ್ಯೇಕ ಲಾಗಿನ್ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದಸ್ತಾವೇಜು ಬರಹಗಾರರ ಅಸೋಸಿಯೇಷನ್ ತಾಲೂಕು ಘಟಕದ ಸದಸ್ಯರು ಹಾಗೂ ದಸ್ತಾವೇಜು ಬರಹಗಾರರು ನಗರದ ಸಬ್ ರಿಜಿಸ್ಟ್ರಾರ್ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಇತ್ತೀಚಿನ ಗಣಕೀಕೃತ ಇ–ಸ್ವತ್ತು ಮತ್ತು ಇ–ಅಸ್ತಿ ದಾಖಲೆಗಳಿಂದ ನೋಂದಣಿಯಲ್ಲಿ ಆಗುತ್ತಿರುವ ತಪ್ಪುಗಳನ್ನು ಸರಿಪಡಿಸಬೇಕು. ಅನಧಿಕೃತ ವ್ಯಕ್ತಿಗಳನ್ನು ತಡೆಗಟ್ಟಬೇಕು ಮತ್ತು ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮಹಾ ಪರಿವೀಕ್ಷಕರಿಂದ ರಾಜ್ಯದ ಎಲ್ಲಾ ಪತ್ರ (ದಸ್ತಾವೇಜು) ಬರಹಗಾರರಿಗೆ ಏಕ ಮಾದರಿಯ ಗುರುತಿನ ಚೀಟಿ ನೀಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪತ್ರ ಬರಗಾರರಿಗೆ ಸೇವಾ ಭದ್ರತೆ ಒದಗಿಸುವುದು ಸೇರಿ ನೋಂದಣಿಯಾಗುವ ಎಲ್ಲಾ ದಸ್ತಾವೇಜುಗಳಿಗೆ ಕಡ್ಡಾಯವಾಗಿ ಪತ್ರ ಬರಹಗಾರರ ಅಥವಾ ವಕೀಲರ ಲೀಗಲ್ ಕಾಂಟ್ರ್ಯಾಕ್ಟ್ ಕಡ್ಡಾಯಗೊಳಿಸಬೇಕು ಎಂದು ಆಗ್ರಹಿಸಿದರು.

ಇತ್ತೀಚೆಗೆ ಕಾವೇರಿ 2.0 ತಂತ್ರಾಂಶದಲ್ಲಿ ಸಿಟಿಜನ್ ಲಾಗಿನ್ ಅಳವಡಿಸಿದ್ದು, ಇದರ ಮೂಲಕ ದಸ್ತಾವೇಜುಗಳ ಬಗ್ಗೆ ಮಾಹಿತಿ ಇಲ್ಲದ ಅನಧಿಕೃತ ವ್ಯಕ್ತಿಗಳು ಸಹ ಪತ್ರ ಅಪ್ಲೋಡ್ ಮಾಡುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ, ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟವಾಗುತ್ತಿದೆ. ಅಧಿಕೃತ ಪತ್ರ ಬರಹಗಾರರ ಜೀವನಕ್ಕೆ ತೊಂದರೆಯಾಗುತ್ತಿದೆ ಎಂದು ಮನವರಿಕೆ ಮಾಡಿಕೊಟ್ಟರು.

ದಸ್ತಾವೇಜು ಬರಹಗಾರರಾದ ಅಶೋಕ ಪರದೇಶಿ, ಹನುಮಂತಸಾ ರಂಗರೇಜ್, ಪ್ರಕಾಶ ಗಾಳಪ್ಪನವರ, ವೀರೇಶ ಕುಲಕರ್ಣಿ, ಗುರುದೇವ ಹಿರೇಮಠ, ನಾಗರಾಜ ದೊಡ್ಡಮನಿ, ಪಿ.ವಿ. ಫಳಿಗೆ ಸೇರಿ ಇತರರು ಪಾಲ್ಗೊಂಡಿದ್ದರು.

## ಆಳಂದ ಮತಗಳ್ಳತನ | ಬಿಜೆಪಿ ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಸೇರಿ 7 ಮಂದಿ ವಿರುದ್ಧ ಎಸ್‌ಐಟಿ ಚಾರ್ಜ್‌ಶೀಟ್

**■ ವಿಜಯಸಾಕ್ಷಿ ಸುದ್ದಿ, ಕಲಬುರಗಿ**

ಕಲಬುರಗಿಯ ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ನಡೆದ ಮತಗಳ್ಳತನ (ಚುನಾವಣಾ ಅಕ್ರಮ) ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ (ಎಸ್‌ಐಟಿ) ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿದ್ದು, ಆಳಂದದ ಬಿಜೆಪಿ ಮಾಜಿ ಶಾಸಕ ಸುಭಾಷ್ ಗುತ್ತೇದಾರ್ ಮತ್ತು ಅವರ ಮಗ ಹರ್ಷಾನಂದ ಗುತ್ತೇದಾರ್ ಅವರನ್ನು ಪ್ರಮುಖ ಆರೋಪಿಗಳನ್ನಾಗಿ ಹೆಸರಿಸಿದೆ ಎಂದು ವರದಿಯಾಗಿದೆ.

ಆರೋಪ ಪಟ್ಟಿಯಲ್ಲಿ ಇತರ ಐದು ಮಂದಿಯ ಮೇಲೆಯೂ ಆರೋಪ ಹೊರಿಸಲಾಗಿದೆ, ಮತ್ತು ಒಬ್ಬ ವ್ಯಕ್ತಿಯನ್ನು ಬಂಧಿಸಲಾಗಿದೆ. ಸುಭಾಷ್ ಗುತ್ತೇದಾರ್ ಮತ್ತು ಅವರ ಮಗ ನಿರೀಕ್ಷಣಾ ಜಾಮೀನು ಪಡೆದಿದ್ದಾರೆ.

2023ರ ವಿಧಾನಸಭಾ ಚುನಾವಣೆಗೆ ಮುನ್ನ ಈ ಪ್ರಕರಣ ಬೆಳಕಿಗೆ ಬಂದಿತ್ತು. ಈ ಸಂದರ್ಭದಲ್ಲಿ ರಾಜ್ಯದಲ್ಲಿ ಬಿಜೆಪಿ ಸರ್ಕಾರವಿತ್ತು. ಆಳಂದ ಕ್ಷೇತ್ರದಿಂದ ಸುಭಾಷ್ ಗುತ್ತೇದಾರ್ ಮರು ಆಯ್ಕೆ ಬಯಸಿದ್ದರು.

## ಸಮ ಸಮಾಜ ನಿರ್ಮಾಣಕ್ಕಾಗಿ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕತೆ, ವೈಚಾರಿಕತೆ ಬೆಳೆಸಿ

▶▶ ಮೊದಲನೇ ಪುಟದಿಂದ

ಬಿ.ಎಸ್. ಪಾಟೀಲ. ಇದನ್ನು ಸ್ವತಃ ನಾರಾಯಣಮೂರ್ತಿ ಅವರೇ ತಮ್ಮ ಪುಸ್ತಕದಲ್ಲಿ ಸ್ಮರಿಸಿದ್ದಾರೆ.

ಉತ್ತರ ಕರ್ನಾಟಕ ಭಾಗ–ಕ್ಕೆ ಕೈಗಾರಿಕೆ ಸ್ಥಾಪನೆ ಜೊತೆಗೆ ಗದಗ ಪ್ರತ್ಯೇಕ ಜಿಲ್ಲೆಯಾಗಲು ಬಿ.ಎಸ್. ಪಾಟೀಲ ಮುಖ್ಯ ಕಾರಣ ಎಂದರು.

ಚಂದನ ಸ್ಕೂಲ್ ಸಂಸ್ಥಾಪಕ ಟಿ. ಈಶ್ವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಎನ್‌ಆರ್ ರಾವ್ ಮತ್ತು ಇಂದುಮತಿ ರಾವ್ ಅವರು ವಿಡಿಯೋ ಕನ್ಫರೆನ್ಸ್ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ರೋಣ ಶಾಸಕ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಬಿ.ಆರ್. ಯಾವಗಲ್, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಕಾಂಗ್ರೆಸ್ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಹುಮಾಯೂನ್ ಮಾಗಡಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಪ್ರೊ. ಶಿವಪ್ರಸಾದ, ಆರ್. ಎಸ್. ಪಾಟೀಲ, ಎಸ್.ಪಿ. ಬಳಿಗಾರ, ಮಿಥುನ್ ಪಾಟೀಲ, ವಿದ್ಯಾನಂದ ಸ್ವಾಮೀಜಿ ಉಪಸ್ಥಿತರಿದ್ದರು.

# ರೈತರ ಜಮೀನುಗಳಿಗೆ ಕೃಷಿ ವಿಜ್ಞಾನಿಗಳ ಭೇಟಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ತಿಮ್ಮಾಪೂರ ಗ್ರಾಮದಲ್ಲಿ ಹಿಂಗಾರು ಹಂಗಾಮಿನಲ್ಲಿ ಕಡಲೆ ಬೆಳೆ ಬೆಳೆದ ರೈತರ ಜಮೀನುಗಳಿಗೆ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ವಿಜ್ಞಾನಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಗದಗ ಕೃಷಿ ಇಲಾಖೆ ಉಪ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ಅವರು ರೈತರೊಂದಿಗೆ ಮಾತನಾಡಿ, ಬಿತ್ತನೆಗೆ ಮೊದಲು ಸರಿಯಾಗಿ ಬೀಜೋಪಚಾರ ಮಾಡುವುದರಿಂದ ಬೀಜಗಳಿಂದ ಹಾಗೂ ಮಣ್ಣಿನಿಂದ ಬರುವ ರೋಗಗಳನ್ನು ತಡೆಗಟ್ಟಲು ಸಾಧ್ಯ. ಕಡಲೆ ಬೆಳೆಯಲ್ಲಿ ಸಿಡಿ ರೋಗ ನಿಯಂತ್ರಣಕ್ಕೆ ಟ್ರೈಕೋಡರ್ಮ ಬೀಜೋಪಚಾರ ಮಾಡುವುದರಿಂದ ನಿಯಂತ್ರಣ ಸಾಧ್ಯವಾಗುತ್ತದೆ. ಕೃಷಿ ಇಲಾಖೆಯಿಂದ ಈ ವರ್ಷ ರಿಯಾಯಿತಿ ದರದಲ್ಲಿ ಕೊಡಮಾಡಿದ ಬಿಜಿಡಿ 111–1 ಸುಧಾರಿತ ತಳಿಯಾಗಿದ್ದು, ಹೆಚ್ಚು ಇಳುವರಿ ಹಾಗೂ ರೋಗನಿರೋಧಕ ಶಕ್ತಿಯನ್ನು ಹೊಂದಿದೆ ಎಂದು ಹೇಳಿದರು. ಕೃಷಿ ವಿಜ್ಞಾನಿ ಡಾ. ಕಲಾವತಿ ಕಾಂಬಳೆ ಮಾತನಾಡಿ, ರೈತರು ವರ್ಷದಿಂದ ವರ್ಷಕ್ಕೆ ಪರ್ಯಾಯ ಬೆಳೆಯನ್ನು ಬೆಳೆಯುವುದರಿಂದ ರೋಗಗಳನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ. ಕಡಲೆ ಬಿತ್ತನೆ ಜೊತೆಗೆ ಮಿಶ್ರ ಬೆಳೆಯಾಗಿ ಜೋಳವನ್ನು ಸೇರಿಸಿ ಬಿತ್ತಿದರೆ ಪಕ್ಷಿಗಳನ್ನು ಆಕರ್ಷಿಸಿ ಕೀಟಗಳ ಹತೋಟಿಯನ್ನು ಮಾಡಲು ಸಹಾಯಕವಾಗುತ್ತದೆ. ಸಿಡಿ ರೋಗ ಕಂಡುಬಂದಂತೆ ಗಿಡಗಳನ್ನು ಕಿತ್ತು ಸುಟ್ಟು ಹಾಕುವುದರಿಂದ ರೋಗವನ್ನು ಹರಡದಂತೆ ತಡೆಯಲು ಸಾಧ್ಯವಾಗುತ್ತದೆ ಎಂದು ಹೇಳಿದರು.



ಈ ಸಂದರ್ಭದಲ್ಲಿ ತಳಿ ಶಾಸ್ತ್ರಜ್ಞ ಡಾ ಮೋಳಗಿ, ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಕೃಷಿ ಅಧಿಕಾರಿ ಬಸವ ರಾಜೇಶ್ವರಿ ಸಜ್ಜನರ, ರಮೇಶ ಜತ್ತಿ, ಹಾಗೂ ರೈತರಾದ ಶರಣಪ್ಪ ಜೋಗಿನ, ಹಾಲ್ಲಪ್ಪ ಗದಗ, ಹುಚ್ಚೀರಪ್ಪ ಜೋಗಿನ, ಶ್ರೀಕಾಂತ ಗುಡ್ಲಾನೂರು, ಮಾರುತಿ ಜೋಗಿನ, ಗಿರೀಶ್ ಗುಡ್ಲಾನೂರು ಮುಂತಾದ ರೈತರು ಪಾಲ್ಗೊಂಡಿದ್ದರು.

# ದ್ವೇಷ ಭಾಷಣ ಕಾನೂನು ಸ್ವಾಗತಾರ್ಹ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ಸರ್ಕಾರ ದ್ವೇಷ ಭಾಷಣ ತಡೆಯಲು 'ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ'ವನ್ನು ವಿಧಾನಸಭೆಯಲ್ಲಿ ಮಂಡಿಸಿದ್ದು ಸ್ವಾಗತಾರ್ಹವಾಗಿದೆ. ಈ ಕಾಯ್ದೆ ಸಮರ್ಪಕವಾಗಿ ಅನುಷ್ಠಾನಗೊಂಡು ದ್ವೇಷ ಕಾರುವವರ ಮೇಲೆ ಕಠಿಣ ಶಿಕ್ಷೆಯಾಗಲಿ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ರಾಜ್ಯಾಧ್ಯಕ್ಷ, ವಕೀಲ ತಾಹೇರ್ ಹುಸೇನ್ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ತಡವಾಗಿಯಾದರೂ ರಾಜ್ಯ ಸರ್ಕಾರ ಇಂತಹ ದ್ವೇಷ ಭಾಷಣದ ವಿರುದ್ಧ ಕಾನೂನು ಸಮರಕ್ಕೆ ಮುಂದಾಗಿರುವುದು ಶ್ಲಾಘನೀಯ. ಈ ಕಾಯ್ದೆಯ ಅಡಿಯಲ್ಲಿ ಮೊದಲ ಬಾರಿ ತಪ್ಪಿಗೆ 7 ವರ್ಷ ಜೈಲು, 50 ಸಾವಿರ ರೂ ದಂಡ, ಪುನರಾವರ್ತನೆ ಆದರೆ 10 ವರ್ಷ ಜೈಲು, 1 ಲಕ್ಷ ರೂ ದಂಡ ವಿಧಿಸಲಾಗುತ್ತದೆ. ಇದು ನೋಂದಾಯಿತ ಹಾಗೂ ನೋಂದಾಯಿತವಲ್ಲದ ಸಂಘಟನೆಗಳಿಗೂ ಅನ್ವಯವಾಗಲಿದೆ ಎಂದು ತಿಳಿಸಲಾಗಿದೆ.

ಈ ಮಸೂದೆಗೆ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ವಿರೋಧ ವ್ಯಕ್ತಪಡಿಸಿ ಹೋರಾಟ ಮಾಡುವುದಾಗಿ ಬೆದರಿಕೆ ಹಾಕುತ್ತಿರುವುದು ಖಂಡನೀಯ. ಇವರ ವಿರೋಧದ ನಿಲುವು ನೋಡಿದರೆ ಸಮಾಜದಲ್ಲಿ ಶಾಂತಿ ನೆಲೆಸುವುದು ಇವರಿಗೆ ಇಷ್ಟವಿಲ್ಲ ಎಂದು ತೋರುತ್ತದೆ. ಪ್ರತಿಯೊಂದಕ್ಕೂ ವಿರೋಧಿಸುವ ಬಿಜೆಪಿ ನಾಯಕರು ದ್ವೇಷ ಭಾಷಣದ ವಿರುದ್ಧ ಕಾಯ್ದೆಗೂ ವಿರೋಧ ಮಾಡುತ್ತಿದ್ದು ಜನರ ಮುಂದೆ ಬೆತ್ತಲಾಗಿದ್ದಾರೆ. ವಿಪಕ್ಷಗಳ ಯಾವುದೇ ಒತ್ತಡಕ್ಕೆ ಆಸ್ಪದ ನೀಡದೇ ರಾಜ್ಯ ಸರ್ಕಾರ ಕಾಯ್ದೆ ಜಾರಿಗೊಳಿಸಿ ಸಮಾಜದಲ್ಲಿ ಶಾಂತಿ ನೆಲೆಸಲು ಮುಂದಾಗಲಿ. ಕಾಯ್ದೆಯಡಿ ಯಾರೇ ತಪ್ಪು ಮಾಡಿದರೂ ಶಿಕ್ಷಿಸುವಂತಾಗಲಿ ಎಂದು ಅವರು ಸರಕಾರಕ್ಕೆ ಒತ್ತಾಯಿಸಿದ್ದಾರೆ.

ಇತಿಹಾಸ ಅಕಾಡೆಮಿಯಿಂದ 'ಐತಿಹಾಸಿಕ ಪರಂಪರೆ ಉಳಿಸಿ' ಕಾರ್ಯಕ್ರಮ

# ಪ್ರವಾಸೋದ್ಯಮದಲ್ಲಿ ವಿಫುಲ ಅವಕಾಶಗಳಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಪಾರಂಪರಿಕ ಪ್ರವಾಸೋದ್ಯಮಕ್ಕೆ ಭವಿಷ್ಯದಲ್ಲಿ ವಿಫುಲ ಅವಕಾಶಗಳಿದ್ದು, ಯುವ ಸಮೂಹ ಅದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಇತಿಹಾಸ ತಜ್ಞ ಡಾ. ಬಾಲಕೃಷ್ಣ ಹೆಗಡೆ ಕರೆ ನೀಡಿದರು.

ಅವರು ಗದಗ ಸಹಕಾರಿ ಜವಳಿ ಗಿರಣಿಯ ಸ್ವತಂತ್ರ ಪೂರ್ವ ಮಹಾವಿದ್ಯಾಲಯದಲ್ಲಿ ಬೆಂಗಳೂರಿನ ಕರ್ನಾಟಕ ಇತಿಹಾಸ ಅಕಾಡೆಮಿ ಹಾಗೂ ಗದುಗಿನ ಜಿಲ್ಲಾ ಘಟಕ ಇವುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 'ಐತಿಹಾಸಿಕ ಪರಂಪರೆ ಉಳಿಸಿ' ಹಾಗೂ ನಾಣ್ಯ-ನೋಟುಗಳು, ಅಂಚೆ ಚೀಟಿಗಳ ಪ್ರದರ್ಶನ, ಪ್ರಾಚ್ಯ ಸ್ಮಾರಕಗಳ ಪಿಪಿಟಿ ಪ್ರದರ್ಶನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ಪಿ.ಯು ವಿದ್ಯಾರ್ಥಿಗಳಿಗೆ ತಾವು ಮುಂದೆ ಏನು ಮಾಡಬೇಕೆಂದು ತೀರ್ಮಾನಿಸುವಲ್ಲಿ ಗೊಂದಲಕ್ಕೀಡಾಗುವುದು ಸಹಜ. ಇಂಥಹ ಸಂದರ್ಭದಲ್ಲಿ ತಜ್ಞರ, ಉಪನ್ಯಾಸಕರ ಸಲಹೆ, ಮಾರ್ಗದರ್ಶನ ಪಡೆದು ಎಚ್ಚರಿಕೆಯ ಹೆಜ್ಜೆ ಇಡುವುದು ಮುಖ್ಯವಾಗಿರುತ್ತದೆ. ಬದುಕಿನಲ್ಲಿ ಗೆಲ್ಲಲು ಕೆಲವು ಸಂಘರ್ಷಕ್ಕಿಂತಲೂ ಸಂಧಾನ ಮುಖ್ಯವಾಗಿದ್ದು, ಸಂಧಾನ ಯಾವತ್ತೂ ಸೋಲುವುದಿಲ್ಲ ಎಂದರು.

ಕೇಂದ್ರ ರಾಜ್ಯ ಸರ್ಕಾರಗಳು ಪಾರಂಪರಿಕ, ಸಾಂಸ್ಕೃತಿಕ ಪ್ರವಾಸೋದ್ಯಮಗಳಿಗೆ ಹೆಚ್ಚಿನ ಒತ್ತನ್ನು ನೀಡುತ್ತಿವೆ. ಆ ಕ್ಷೇತ್ರಗಳಲ್ಲಿ ಆಸಕ್ತಿ ಇರುವವರಿಗೆ ತರಬೇತಿ, ಹಣಕಾಸಿನ ನೆರವು ಇತ್ಯಾದಿ ಸೌಲಭ್ಯಗಳನ್ನು ನೀಡುವುದರ ಮೂಲಕ ಸುಸ್ಥಿರ ಆರ್ಥಿಕ ಬೆಳವಣಿಗೆಗೆ ಪೂರಕವಾದ ವಾತಾವರಣವನ್ನು ನಿರ್ಮಿಸುತ್ತಿದೆ. ಹಸ್ತಪ್ರತಿ, ತಾಳೆಗರಿ, ಮರದ ಮೇಲಿನ ಕೆತ್ತನೆ, ಬಟ್ಟೆಗಳ ಮೇಲಿನ ಬರಹ ಮೊದಲಾದವುಗಳನ್ನು ಸಂರಕ್ಷಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ 'ಕರ್ನಾಟಕ ಜ್ಞಾನ ಭಂಡಾರ ಹಸ್ತಪ್ರತಿ ವಿಧೇಯಕ-2025'ನ್ನು ಮಂಡಿಸಲು ಸಜ್ಜಾಗಿರುವುದು ಸ್ವಾಗತಾರ್ಹ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಶೈಕ್ಷಣಿಕ ಸಲಹಾ ಸಮಿತಿಯ ಅಧ್ಯಕ್ಷ ಡಿ.ಬಿ. ಓದುಗೌಡರ್ ಮಾತನಾಡಿ, ಯಾವುದೇ ಕೆಲಸವನ್ನು ಗಟ್ಟಿ ನಿರ್ಧಾರದಿಂದ ಮಾಡಿದರೆ ಆ ಕೆಲಸ ಯಶಸ್ಸು ಕಾಣುತ್ತದೆ. ಐತಿಹಾಸಿಕ ಪರಂಪರೆಯನ್ನು ಉಳಿಸಿ, ಬೆಳೆಸಿ ಐತಿಹಾಸಿಕ ಸ್ಮಾರಕಗಳ ಮಹತ್ವವನ್ನು ಅರಿಯುವುದರ ಮೂಲಕ ವಿದ್ಯಾರ್ಥಿಗಳು ನಾಡಿನ ಭವ್ಯ ಪರಂಪರೆಗೆ ಮತ್ತು ಸಂಸ್ಕೃತಿಗೆ ಗೌರವ ತರಬೇಕು ಎಂದರು.

ಅಕಾಡೆಮಿಯ ರಾಜ್ಯ ಕಾರ್ಯಕಾರಿಣಿ ಮಂಡಳಿಯ ಸದಸ್ಯ ಡಾ. ದತ್ತಪ್ರಸನ್ನ ಪಾಟೀಲ ಪ್ರಾಸ್ತಾವಿಕ ನುಡಿಗಳನ್ನಾಡಿ, ಅಕಾಡೆಮಿಯು ಕಳೆದ ಅನೇಕ ವರ್ಷಗಳಿಂದ ವಿದ್ಯಾರ್ಥಿಗಳಲ್ಲಿ ಸ್ಥಳೀಯ ಇತಿಹಾಸ, ಸಂಸ್ಕೃತಿ, ಪರಂಪರೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಪಿ.ಯು ಮಕ್ಕಳಲ್ಲಿ ಇತಿಹಾಸದಲ್ಲಿ ಆಸಕ್ತಿ ಮೂಡಿಸಲು ವಿವಿಧ ಸ್ಪರ್ಧೆಗಳನ್ನು ಏರ್ಪಡಿಸುವುದರ ಜೊತೆಗೆ ಕ್ಷೇತ್ರ ಕಾರ್ಯಕ್ಕೂ ಮಕ್ಕಳನ್ನು ಕರೆದುಕೊಂಡು ಹೋಗಲಾಗುತ್ತಿದೆ ಎಂದು ಅಕಾಡೆಮಿ ಕಾರ್ಯಚಟುವಟಿಕೆಗಳನ್ನು ವಿವರಿಸಿದರು.

ಇದೇ ಸಂದರ್ಭದಲ್ಲಿ ಹಿರಿಯ ಇತಿಹಾಸ ಸಂಶೋಧಕ ಡಾ. ಬಾಲಕೃಷ್ಣ ಹೆಗಡೆ, ಸಂಪನ್ಮೂಲ ವ್ಯಕ್ತಿಗಳಾದ ಡಾ. ವಾಯ್.ಆರ್. ಬೇಲೇರಿ, ಡಾ. ಎಸ್.ಎಂ. ಮಠ, ಡಾ. ದತ್ತಪ್ರಸನ್ನ ಪಾಟೀಲ, ಅಪ್ಪಟ ಬೇಲೇರಿ, ಪ್ರೊ. ಕೆ.ಎಂ. ಗರಗ ಅವರನ್ನು ಸನ್ಮಾನಿಸಲಾಯಿತು.

ಅಕಾಡೆಮಿಯ ಜಿಲ್ಲಾಧ್ಯಕ್ಷ ಡಾ. ವೈ.ಆರ್. ಬೇಲೇರಿ, ಸಹ ಕಾರ್ಯದರ್ಶಿ ಡಾ. ಎಸ್.ಎಂ. ಮಠ, ಐತಿಹಾಸಿಕ ಪರಂಪರೆ ಉಳಿಸಿ ಹಾಗೂ ಐತಿಹಾಸಿಕ ಸ್ಮಾರಕಗಳ ಮಹತ್ವ ಕುರಿತು ಪಿಪಿಟಿ ಮೂಲಕ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ನೀಡಿದರು. ಅಂಚೆ ಚೀಟಿ ಪ್ರದರ್ಶಕ ಅಪ್ಪಾಬ ಬೇಲೇರಿ ಅಪರೂಪದ ನಾಣ್ಯ ನೋಟು, ಅಂಚೆ ಚೀಟಿಗಳ ಪ್ರದರ್ಶನದ ವಿಶೇಷತೆ ವಿವರಿಸಿದರು.

ಅಕಾಡೆಮಿಯ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರೊ. ಕೆ.ಎಂ. ಗರಗ ಸ್ವಾಗತಿಸಿದರು. ಪ್ರೊ. ರಾಮಚಂದ್ರ ಮಿಟ್ಟಿಮನಿ, ಉಪನ್ಯಾಸಕರಾದ ಕೃಷ್ಣ ರವಳೋಜಿ, ಮಹಾಲಕ್ಷ್ಮೀ ಹಿರೇಮಠ, ಸಚಿನ ಸತ್ಯರಡ್ಡಿ, ಮಲ್ಲಿಕಾರ್ಜುನ ಬಾಲಪ್ಪನವರ್, ವಿದ್ಯಾರ್ಥಿ ಮುಖಂಡರಾದ ದಿವ್ಯಾ ಅಗಸನಕೊಪ್ಪ, ಗಣೇಶ್ ಬ್ಯಾಡಗಿ ಮೊದಲಾದವರು ಉಪಸ್ಥಿತರಿದ್ದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಅರ್ಜುನ ಗೊಳಸಂಗಿ ಮಾತನಾಡಿ, ವಿದ್ಯಾರ್ಥಿಗಳು ಪ್ರಜ್ಞೆ ಮತ್ತು ಪರಿಸರವನ್ನು ಮನಗಂಡು ಕಾರ್ಯೋನ್ಮುಖರಾಗಬೇಕು. ಇತಿಹಾಸ, ಸಂಸ್ಕೃತಿ, ಪರಂಪರೆಗಳ ಬಗ್ಗೆ ಪರಿಜ್ಞಾನ ಹೊಂದಿರಬೇಕು. ಈಗ ಬರೆದಿರುವ ಇತಿಹಾಸ ಪುಸ್ತಕಗಳಲ್ಲಿ ಅನೇಕ ತಪ್ಪುಗಳಿಗೆ. ಪಾಠ ಮಾಡುವಾಗ ಅವುಗಳನ್ನು ಸರಿಪಡಿಸಿಕೊಂಡು ಇತಿಹಾಸದ ಸತ್ಯವನ್ನೇ ಮಕ್ಕಳಿಗೆ ತಿಳಿಸಬೇಕು ಎಂದು ಅಭಿಪ್ರಾಯಪಟ್ಟರು.

# ಪರಿಶ್ರಮದೊಂದಿಗೆ ಉತ್ತಮ ಪ್ರಜೆಗಳಾಗಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ


ಹೆತ್ತ ತಂದೆ-ತಾಯಿ, ವಿದ್ಯೆ ಕಲಿಸಿದ ಗುರುಗಳನ್ನು ಎಂದಿಗೂ ಮರೆಯಬಾರದು ಎಂದು ಗದಗ ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ಅಧ್ಯಕ್ಷ ಬಿ.ಡಿ. ಹರ್ಷಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ. 1ರಲ್ಲಿ ಸನ್ಮಾನ ಸ್ವೀಕರಿಸಿ, ಮಕ್ಕಳೊಂದಿಗೆ ಸಂವಾದ ನಡೆಸಿ ಮಾತನಾಡಿ, ತಂದೆ-ತಾಯಿ ಮಕ್ಕಳಿಗಾಗಿ ನಿತ್ಯ ಸಾಕಷ್ಟು ಕಷ್ಟ ಕಾರ್ಪಣ್ಯಗಳನ್ನು ಸಹಿಸುತ್ತಾ ಮಕ್ಕಳ ಭವಿಷ್ಯಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟಿರುತ್ತಾರೆ. ಅವರ ಶ್ರಮ ವ್ಯರ್ಥ ಮಾಡದೆ ಕಷ್ಟಪಟ್ಟು ಓದಬೇಕು. ನಮ್ಮ ಭವಿಷ್ಯದ ರೂವಾರಿಗಳಾದ ಗುರುಗಳು ಮಕ್ಕಳಿಗಾಗಿ ಶ್ರಮಿಸಿ, ಸಮಾಜದಲ್ಲಿ ಉತ್ತಮ ಪ್ರಜೆಗಳನ್ನಾಗಿ ರೂಪಿಸುವಲ್ಲಿ ಪ್ರಮುಖರು. ಸತತ ಪರಿಶ್ರಮದೊಂದಿಗೆ ನಾಡಿನ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಬೇಕು ಎಂದರು.

ಶಿಕ್ಷಕಿ ವಿ.ಎಂ. ಕಂಠಿ ಮಾತನಾಡಿ, ಬಿ.ಡಿ. ಹರ್ಷಿ ಅವರು ಈ ಶಾಲೆಯ ಹಳೆ ವಿದ್ಯಾರ್ಥಿಯಾಗಿದ್ದು, ಕಡು ಬಡತನದಲ್ಲಿ ಬೆಳೆದವರು. ಅವರು ಆರ್‌ಟಿಓ ಅಧಿಕಾರಿಯಾಗಿ ಗದಗದಲ್ಲಿ ಅತ್ಯುನ್ನತ ಶಿಕ್ಷಣ ಸಂಸ್ಥೆ ತೆರೆಯುವ ಮೂಲಕ ಸಾಕಷ್ಟು ವಿದ್ಯಾರ್ಥಿಗಳ ಭವಿಷ್ಯ ರೂಪಿಸುತ್ತಿದ್ದು, ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕ ಪಡೆದವರಿಗೆ ಪ್ರತಿ ವರ್ಷ ಗೌರವ ನೀಡುತ್ತಿ, ಸರಳ ಸಜ್ಜನಿಕೆಯ ವ್ಯಕ್ತಿಯಾಗಿರುವುದು ನಮ್ಮ ಶಾಲೆಯ ಗೌರವ ಹೆಚ್ಚಿಸಿದೆ ಎಂದರು.

ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಕೆ.ಎಂ. ಹೆರಕಲ್ಲ, ಎಂ.ಎಂ. ಕೊಪ್ಪಳ, ಎಸ್.ಎಚ್. ಉಪ್ಪಾರ, ಎಚ್.ಆರ್. ಭಜಂತ್ರಿ, ಎಸ್.ವಿ. ಹಿರೇಮಠ, ಟಿ.ವೀಣಾ, ವಿ.ಎಂ. ಕಂಠಿ, ಎಸ್.ಡಿ. ಪಂಡಿತ, ಶೈಲಾ ದೊಡ್ಡಮನಿ, ತ್ರಿವೇಣಿ ಬಡ್ನಿ, ರತ್ನಾ ಬಬಲಿಯವರ, ಶಭಾನಾ ಢಾಲಾಯತ, ಕವಿತಾ ಬಿನ್ನಾಳ ಇದ್ದರು.

# ಸಿಎಂ ಸಿದ್ದರಾಮಯ್ಯರಿಗೆ ರೈತರಿಂದ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದಲ್ಲಿ ಶನಿವಾರ ನಡೆದ ಭಾರತರತ್ನ ಪ್ರೊ. ಸಿ.ಎನ್. ರಾವ್ ಅವರ 10ನೇ ವರ್ಷದ ವಿಜ್ಞಾನ ವಿಸ್ತೃತ ಕಾರ್ಯಕ್ರಮದ ಉದ್ಘಾಟನೆಗೆ ಆಗಮಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಸಮಗ್ರ ರೈತಪರ ಸಂಘಟನೆಗಳ ಒಕ್ಕೂಟ ಹಾಗೂ ವಿವಿಧ ಸಂಘಟನೆಗಳ ವತಿಯಿಂದ ಸನ್ಮಾನಿಸಲಾಯಿತು.

ಮೆಕ್ಕೆಜೋಳವನ್ನು 2400 ರೂ ಬೆಂಬಲ ಬೆಲೆಯಡಿ ಖರೀದಿಗೆ ಆಗ್ರಹಿಸಿ ಸಮಗ್ರ ರೈತಪರ ಸಂಘಟನೆಗಳ ಒಕ್ಕೂಟದಿಂದ 18 ದಿನಗಳ ಕಾಲ ಅಹೋರಾತ್ರಿ ಧರಣಿ ಸತ್ಯಾಗ್ರಹ ಮಾಡಿದ್ದರು. ಪರಿಣಾಮ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ರೈತರ ಈ ಹೋರಾಟವನ್ನು ಪರಿಗಣಿಸಿ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸಿದ್ದಲ್ಲದೇ 5 ಕ್ವಿಂಟಲ್ ಬದಲಾಗಿ ಪ್ರತಿ ರೈತ-ರಿಂದ 50 ಕ್ವಿಂಟಲ್ ಮೆಕ್ಕೆಜೋಳ ಖರೀದಿಗೆ ರಾಜ್ಯ ಸರಕಾರದ ಮೂಲಕ ಆದೇಶಿಸಿದ್ದರು. ಇದರಿಂದ ಸಂತುಷ್ಟರಾದ ರೈತ ಹೋರಾಟಗಾರರು ಸಿಎಂ ಸಿದ್ದರಾಮಯ್ಯನವರಿಗೆ ಜೋಡು ಎತ್ತಿನ ಚಕ್ಕಡಿ ಕಾಣಿಕೆ ನೀಡಿ ಗೌರವಿಸಿ ಕೃತಜ್ಞತೆ ಸಲ್ಲಿಸಿದರು. ಇದೇ ವೇಳೆ ಇದಕ್ಕೆ ಕಾರಣೀಕರ್ತರಾದ ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲರನ್ನು ಸನ್ಮಾನಿಸಿದರು.

ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ, ಆನಂದ ಗಡ್ಡದೇವರಮಠ, ಸುಜಾತಾ ದೊಡ್ಡಮನಿ, ಎಸ್.ಪಿ. ಬಳಿಗಾರ, ರೈತ ಮುಖಂಡರಾದ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಎಂ.ಎಸ್. ದೊಡ್ಡಗೌಡ್ರ, ನೀಲಪ್ಪ ಶೇರಸೂರಿ, ದಾದಾಪೀರ ಮುಚ್ಚಾಲೆ, ಹೊನ್ನಪ್ಪ ವಡ್ಡರ, ಅಭಯ ಜೈನ ಸೇರಿ ಸಮಗ್ರ ರೈತಪರ ಸಂಘಟನೆಗಳ ಒಕ್ಕೂಟ ರೈತ ಮುಖಂಡರು ಇದ್ದರು.

# ಫೆಲೋಶಿಪ್ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ದೆಹಲಿಯ ಭಾರತೀಯ ದಲಿತ ಸಾಹಿತ್ಯ ಅಕಾಡೆಮಿ ಅವರು ಸಾವಿತ್ರಿಬಾಯಿ ಪುಲೆ ರಾಷ್ಟ್ರೀಯ ಫೆಲೋಶಿಪ್ ಪ್ರಶಸ್ತಿಗೆ ಆರೋಗ್ಯ ಇಲಾಖೆಯ ಮುಂಡರಗಿ ತಾಲೂಕಿನ ಕಲಕೇರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಗಿರಿಜಾ ಕೆ.ದಾನಪ್ಪಗೌಡ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಹಿರೇವಡ್ಡಟ್ಟಿಯಲ್ಲಿ ಸೇವೆ ಸಲ್ಲಿಸುತ್ತಿರುವ ಜಬೀನಾ ಬೋಧಲೆಖಾನ್, ಪ್ರಾಥಮಿಕ ಆರೋಗ್ಯ ಕೇಂದ್ರ ಜಂತ್ಲಿ ಶಿರೂರಲ್ಲಿ ಸೇವೆ ಸಲ್ಲಿಸುತ್ತಿರುವ ಶೀರಿನ್ ಎಂ.ಕಾಗದಗಾರ್, ತಬಸುಮಬೇಗಂ ರೋಣದ ಮತ್ತು ಭಗವಾನ್ ಬುದ್ಧ ರಾಷ್ಟ್ರೀಯ ಫೆಲೋಶಿಪ್ ಪ್ರಶಸ್ತಿ ಪಡೆದ ಎಂ.ಕೆ. ಸ್ವಾಮಿ ಅವರಿಗೆ ದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಅಕಾಡೆಮಿಯ ರಾಷ್ಟ್ರೀಯ ಅಧ್ಯಕ್ಷ ಡಾ. ಸಮಾನಸ್ಕರ್ ಪ್ರಶಸ್ತಿ ಪ್ರದಾನ ಮಾಡಿದರು. ಇವರಿಗೆ ಗದಗ ಜಿಲ್ಲೆಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಎಸ್.ಎಸ್. ನೀಲಗುಂದ, ತಾಲೂಕಾ ಆರೋಗ್ಯಾಧಿಕಾರಿ ಡಾ. ಲಕ್ಷ್ಮಣ್ ಪೂಜಾರ, ತಾಲೂಕಾಸ್ಪತ್ರೆಯ ವೈದ್ಯಾಧಿಕಾರಿಗಳು, ಮುಂಡರಗಿ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರದ ಎಲ್ಲಾ ವೈದ್ಯಾಧಿಕಾರಿಗಳು, ಸಿಬ್ಬಂದಿ ವರ್ಗದವರು ಸೇರಿದಂತೆ ಗದಗ ಜಿಲ್ಲೆಯ ಆರೋಗ್ಯ ಇಲಾಖೆಯ ಸಿಬ್ಬಂದಿ ವರ್ಗದವರು ಅಭಿನಂದನೆ ತಿಳಿಸಿದ್ದಾರೆ.

# ಶಿಲ್ಪಾ ಶೆಟ್ಟಿ ಒಡೆತನದ ಪಬ್ ನಲ್ಲಿ ಮಾಜಿ ಬಿಗ್ ಬಾಸ್ ಸ್ಪರ್ಧಿ ಗಲಾಟೆ: ಸಿಬ್ಬಂದಿ ಮೇಲೆ ಹಲ್ಲೆ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜಧಾನಿ ಬೆಂಗಳೂರಿನ ಲ್ಯಾಂಗ್‌ಫೋರ್ಡ್ ರಸ್ತೆಯಲ್ಲಿರುವ ನಟಿ ಶಿಲ್ಪಾ ಶೆಟ್ಟಿ ಒಡೆತನದ 'ಬ್ಯಾಸ್ಟಿಯನ್' ಪಬ್‌ನಲ್ಲಿ ಗುರುವಾರ ರಾತ್ರಿ ಕಿರಿಕ್ ನಡೆದಿದೆ.

ಮಾಜಿ ಬಿಗ್ ಬಾಸ್ ಸ್ಪರ್ಧಿ, ನಿರೂಪಕಿಯ ಮಾಜಿ ಪತಿ ಹಾಗೂ ಉದ್ಯಮಿ ಸತ್ಯ ನಾಯ್ಡು ಅವರು ಪಬ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದ್ದು, ಸಂಬಂಧಿಸಿದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಸರ್ವಿಸ್ ವಿಚಾರವಾಗಿ ಆರಂಭವಾದ ವಾಗ್ವಾದವು ನಂತರ ಹಲ್ಲೆಗೆ ತಿರುಗಿದ್ದು, ಘಟನೆಯ ಸಮಯದಲ್ಲಿ ಸತ್ಯ ನಾಯ್ಡು ಅತಿಯಾಗಿ ಮದ್ಯಪಾನ ಮಾಡಿದ್ದರು ಎನ್ನಲಾಗಿದೆ. ಗಲಾಟೆಯ ದೃಶ್ಯಗಳು ವಿಡಿಯೋದಲ್ಲಿ ಸೆರೆಯಾಗಿದ್ದು, ಇದನ್ನು ಆಧರಿಸಿ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಘಟನೆ ಸಂಬಂಧ ಕಬ್ಬನ್ ಪಾರ್ಕ್ ಠಾಣೆ ಪೊಲೀಸರು ಪಬ್‌ಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿದ್ದು, ವೈರಲ್ ವಿಡಿಯೋ ಪರಿಶೀಲನೆ ನಡೆಸುತ್ತಿದ್ದಾರೆ. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ.




# ಬಸವ ಯೋಗ ಮಹಾವಿದ್ಯಾಲಯದಿಂದ ಜನಕಲ್ಯಾಣ ಕಾರ್ಯ




■ವಿಜಯಸಾಕ್ಷಿ ಸುದ್ದಿ, ಗದಗ

ಅನೇಕ ಮಹಾವಿದ್ಯಾಲಯಗಳು ವಿದ್ಯಾರ್ಥಿಗಳ ಅಭ್ಯುದಯಕ್ಕಾಗಿ ಶ್ರಮಿಸಿದರೆ, ಬಸವ ಯೋಗ ಮಹಾವಿದ್ಯಾಲಯವು ವಿದ್ಯಾರ್ಥಿಗಳ ಅಭ್ಯುದಯದ ಜೊತೆಗೆ ಯೋಗದ ಮೂಲಕ ಜನಪರ ಮತ್ತು ರಾಷ್ಟ್ರ ಪ್ರಗತಿಗೆ ಪೂರಕವಾದ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದು ಸ್ಥಾನಿಕ ತನಿಖಾ ಸಮಿತಿಯ ಅಧ್ಯಕ್ಷರು ಮತ್ತು ಸ್ನಾತಕೋತ್ತರ ಮನೋವಿಜ್ಞಾನ ವಿಭಾಗ, ಕವಿವಿ ಪ್ರಾಧ್ಯಾಪಕರಾದ ಡಾ. ಶಿವಕುಮಾರ ಕೆ ಅಭಿಪ್ರಾಯಪಟ್ಟರು.

ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯಕ್ಕೆ ಶೈಕ್ಷಣಿಕ ಸಾಲಿನ ಸಂಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ವಿಶ್ವವಿದ್ಯಾಲಯದ ಸ್ಥಾನಿಕ ತನಿಖಾ ಸಮಿತಿಯೊಂದಿಗೆ ಭೇಟಿ ನೀಡಿ, ಮಹಾವಿದ್ಯಾಲಯದ ರೂಪು-ರೇಷೆ, ಕಾರ್ಯಚಟುವಟಿಕೆಗಳನ್ನು ವೀಕ್ಷಿಸಿ ಯೋಗ ಪ್ರ್ಯಾಕ್ಟಿಕಲ್ ಹಾಲ್ ವೀಕ್ಷಣೆ ಮಾಡುವ ಸಂದರ್ಭದಲ್ಲಿ ಅವರು ಮಾತನಾಡಿದರು.

ಇಂದು ವಿದ್ಯಾರ್ಥಿಗಳಿಗೆ ಶಾರೀರಿಕ, ಮಾನಸಿಕ, ನೈತಿಕ ಶಿಕ್ಷಣ ದೊರಕಿಸುವುದು ಅಗತ್ಯವಾಗಿದೆ. ಈ ಕಾರ್ಯ ಯೋಗ ಶಿಕ್ಷಣದಿಂದ ಮಾತ್ರ ಸಾಧ್ಯವಾಗುವುದು. ಕಾರಣ ಯೋಗ ಶಿಕ್ಷಣವು ವಿದ್ಯಾರ್ಥಿಗಳಲ್ಲಿ ದೈಹಿಕ, ಮಾನಸಿಕ, ನೈತಿಕ, ಸಾಮಾಜಿಕ, ಆರ್ಥಿಕ ಆರೋಗ್ಯ ಜೊತೆಗೆ ಸೇವಾ ಮನೋಭಾವನೆಯನ್ನು ಹೆಚ್ಚಿಸುವುದು. ಇದರಿಂದ ವಿದ್ಯಾರ್ಥಿಗಳು ಉತ್ತಮ ನಾಗರಿಕರಾಗಿ ಬೆಳೆದು ಸಮಾಜ ಮತ್ತು ರಾಷ್ಟ್ರದ ಒಳಿತಿಗಾಗಿ ಶ್ರಮಿಸುವರು ಎಂದರಲ್ಲದೆ, ಕಾರ್ಯ ಸಾಧನೆಗೆ ಸರಕಾರ ಮತ್ತು ಸಾರ್ವಜನಿಕ ಸಹಾಯ ಸಹಕಾರಗಳನ್ನು ಪಡೆಯಲು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಾನಿಕ ತನಿಖಾ ಸಮಿತಿ ಸದಸ್ಯರಾದ ಡಾ. ಪಿ.ಎಂ. ಬಿರಾದಾರ, ಡಾ. ಅನಸೂಯಾ ಕಾಂಬಳೆ, ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಡಿ.ಸಿ. ಪಾವಟೆ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಪಿ. ಗೌಳಿ, ಎನ್.ಎಂ. ನದಾಫ್, ಎಸ್. ಆರ್. ಗಿಡ್ಡಕೆಂಚಣ್ಣವರ, ಕಲಾವತಿ ಸಂಕನಗೌಡರ, ಎಸ್.ಎಂ. ಬುರಡಿ ಉಪಸ್ಥಿತರಿದ್ದರು.

ಯೋಗ ಪಾಠಶಾಲೆ ಸಂಸ್ಥೆಯ ಅಧ್ಯಕ್ಷರಾದ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಬಸವ ಯೋಗ ಮಹಾವಿದ್ಯಾಲಯದ ಆಡಳಿತಾಧಿಕಾರಿಗಳಾದ ಎಸ್.ಎಸ್. ಪಟ್ಟಣಶೆಟ್ಟಿ, ಸಹಕಾರ್ಯದರ್ಶಿ ಎಂ.ಎಸ್. ಅಂಗಡಿ ಹಾಗೂ ಸಿಬ್ಬಂದಿ ವರ್ಗದವರು ತನಿಖಾ ಸಮಿತಿಯವರಿಗೆಲ್ಲರಿಗೂ ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಫೇಸ್ ಬುಕ್ ಸುಂದರಿ ನಂಬಿ ಹೋದ ಯುವಕನಿಗೆ ಕಾದಿತ್ತು ಶಾಕ್: ಹೋಂ ಸ್ಟೇಗೆ ಕರೆಸಿಕೊಂಡು ಮಾಡಿದ್ದೇನು ಗೊತ್ತಾ!?

■ವಿಜಯಸಾಕ್ಷಿ ಸುದ್ದಿ, ಮಡಿಕೇರಿ

ಫೇಸ್‌ಬುಕ್‌ನಲ್ಲಿ ಪರಿಚಯವಾದ ಯುವತಿಯನ್ನು ಭೇಟಿ ಮಾಡಲು ಮಡಿಕೇರಿಗೆ ಬಂದಿದ್ದ ಮಂಡ್ಯ ಮೂಲದ ಯುವಕನಿಗೆ ಭಯಾನಕ ಅನುಭವ ಎದುರಾಗಿದೆ.

ಯುವತಿಯನ್ನು ಭೇಟಿಯಾದ ನೆಪದಲ್ಲಿ ಮಡಿಕೇರಿಯ ಖಾಸಗಿ ಹೋಂ ಸ್ಟೇಗೆ ಕರೆಸಿ ಕೂಡಿ ಹಾಕಿ ಹಣಕ್ಕಾಗಿ ಬೇಡಿಕೆ ಇಟ್ಟ ಘಟನೆ ಬೆಳಕಿಗೆ ಬಂದಿದೆ. ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ಮಹದೇವ್‌ಗೆ ಇತ್ತೀಚೆಗೆ ಫೇಸ್‌ಬುಕ್‌ನಲ್ಲಿ ಯುವತಿಯೊಬ್ಬಳ ಪರಿಚಯವಾಗಿತ್ತು. ಆಕೆಯ ಆಹ್ವಾನದಂತೆ ಶುಕ್ರವಾರ ಸಂಜೆ ಮಡಿಕೇರಿಗೆ ಬಂದಿದ್ದ ಮಹದೇವ್, ಒಂಟಿಯಾಗಿ ಮಡಿಕೇರಿ ನಗರದಲ್ಲಿರುವ ಮಂಗಳಾದೇವಿ ನಗರದಲ್ಲಿನ ಮನೆಯೊಂದಕ್ಕೆ ತೆರಳಿದ್ದಾನೆ. ಅಲ್ಲಿ ಕೆಲ ಕಾಲ ಯುವತಿಯೊಂದಿಗೆ ಮಾತನಾಡಿ, ಡ್ರಿಂಕ್ಸ್ ಸೇವನೆ ಮಾಡಿದ್ದು, ಮಡಿಕೇರಿಯ ಪ್ರವಾಸಿ ಸ್ಥಳಗಳ ಬಗ್ಗೆ ಮಾಹಿತಿ ನೀಡಲಾಗಿದೆ. ಈ ನಡುವೆ ಯುವತಿಗೆ ಫೋನ್ ಕರೆ ಬಂದಿದ್ದು, ಸಂಬಂಧಿಕರೊಬ್ಬರು ಮೃತಪಟ್ಟಿದ್ದಾರೆ ಎಂದು ಹೇಳಿ ಆಕೆ ಅಲ್ಲಿಂದ ಹೊರಟಿದ್ದಾಳೆ. ಅದೇ ಸಮಯದಲ್ಲಿ ಕೋಣೆಗೆ ನುಗ್ಗಿದ ಮೂವರು ಯುವಕರು ಮಹದೇವ್ ಬಳಿ ಇದ್ದ ಹಣ ಹಾಗೂ ವಸ್ತುಗಳನ್ನು ಕಿತ್ತುಕೊಂಡು ಹಲ್ಲೆ ನಡೆಸಿದ್ದಾರೆ.

ಅವರಿಂದ ಭಾರೀ ಮೊತ್ತದ ಹಣಕ್ಕೆ ಬೇಡಿಕೆ ಇಡಲಾಗಿತ್ತು. ಯಾವುದೋ ರೀತಿಯಲ್ಲಿ ತಪ್ಪಿಸಿಕೊಂಡ ಮಹದೇವ್ ಮನೆ ಹೊರಗೆ ಬಂದಿದ್ದಾನೆ. ಆದರೂ ಆತನನ್ನು ಬೆನ್ನಟ್ಟಿದ ಆರೋಪಿಗಳು ಆಟೋದಲ್ಲಿ ಅಪಹರಣ ಮಾಡಲು ಯತ್ನಿಸಿದ್ದು, ಈ ದೃಶ್ಯಗಳು ಸಿಸಿಟಿವಿ ಕ್ಯಾಮೆರಾದಲ್ಲಿ ದಾಖಲಾಗಿವೆ.

ಮೂವರಿಂದ ಪಾರಾದ ಮಹದೇವ್ ಅರೆಬೆತ್ತಲಾಗಿ ಮಡಿಕೇರಿ ನಗರ ಪೊಲೀಸ್ ಠಾಣೆಗೆ ಓಡೋಡಿ ಬಂದು ದೂರು ದಾಖಲಿಸಿದ್ದಾನೆ. ವಿಷಯ ತಿಳಿದು ಸ್ಥಳಕ್ಕೆ ಪೊಲೀಸರು ಭೇಟಿ ನೀಡುವಷ್ಟರಲ್ಲಿ ಆರೋಪಿಗಳು ಪರಾರಿಯಾಗಿದ್ದಾರೆ. ಘಟನಾ ಸ್ಥಳದಿಂದ ಹಲ್ಲೆಗೆ ಬಳಸಲು ಸಿದ್ಧಪಡಿಸಿದ್ದ ಮಾರಕಾಸ್ತ್ರಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಇದು ಹನಿಟ್ರ್ಯಾಪ್ ಪ್ರಕರಣವಾಗಿರುವ ಶಂಕೆ ವ್ಯಕ್ತವಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಈ ಪ್ರಕರಣದ ರೂವಾರಿಯಾದ ರಚನಾ ಮಡಿಕೇರಿ ನಗರದ ಅಶೋಕಪುರ ನಿವಾಸಿಯಾಗಿದ್ದು, ಈಕೆ ಹಿಂದೆಯೇ ಪೊಲೀಸ್ ಪೇದೆಯೊಬ್ಬರೊಂದಿಗೆ ವಿವಾಹವಾಗಿದ್ದಳು. ಕುಡಿತದ ಚಟದ ಕಾರಣ ಗಂಡ ಬೇಸತ್ತು ವಿಚ್ಛೇದನ ನೀಡಿದ್ದನೆಂದು ಪೊಲೀಸ್ ಮೂಲಗಳು ತಿಳಿಸಿವೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka